ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 157 RNI Number : KNKAN/25/A2770 15-06-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :157 ರಾಯಚೂರು 15-06-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಸಚಿವ ಸ್ಥಾನ ಗಿಟ್ಟಿಸಿಕೊಳ್ಳಲು ಜಮೀರ್ ನಾನಾ ರೀತಿಯ ಸರ್ಕಸ್, ಕ್ಯಾರೆ ಎನ್ನದ ಸಿಎಂ ಡಿಕೆಶಿ

ಬೆಂಗಳೂರು, ಜೂ. 14- ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರಮಾಪ್ತ ಎಂಬ ಕಾರಣಕ್ಕಾಗಿ ಪದೇ ಪದೇ ಪಕ್ಷದ ಶಿಸ್ತು ಉಲ್ಲಂಘಿಸುತ್ತಿದ್ದ ಮಾಜಿ ಸಚಿವ ಜಮೀರ್ ಅಹಮದ್ ಖಾನ್, ಈಗ ಹಿರಿಯ ನಾಯಕರ ಮನೆ ಮನೆ ಸುತ್ತುವ ಪರಿಸ್ಥಿತಿ ಬಂದಿದೆ.

ಜೂನ್ 18ರ ಬಳಿಕ ಸಚಿವ ಸಂಪುಟ ವಿಸ್ತರಣೆಯಾಗಲಿದೆ ಎಂಬ ವದಂತಿಗಳಿವೆ. ಅದರಲ್ಲಿ ಅವಕಾಶ ಗಿಟ್ಟಿಸಲು ಬಹಳಷ್ಟು ಶಾಸಕರು ನಾನಾ ರೀತಿಯ ಕಸರತ್ತು ನಡೆಸುತ್ತಿದ್ದಾರೆ. ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿದ್ದವರ ಪೈಕಿ ಜಮೀರ್ ಅಹಮದ್ ಖಾನ್ ಮತ್ತು ಎಚ್.ಸಿ.ಮಹದೇವಪ್ಪ ಅವರಿಗೆ ಎರಡನೇ ಬಾರಿ ಅವಕಾಶ ದೊರೆಯುವ ಸಾಧ್ಯತೆಗಳು ಕ್ಷೀಣವಾಗಿವೆ.

ಎಚ್.ಸಿ.ಮಹದೇವಪ್ಪ ಅವರು ವಿವಿಧ ಸಂಘಟನೆಗಳನ್ನು ಬಳಸಿಕೊಂಡು ಪ್ರತಿಭಟನೆ ನಡೆಸುವ ಮೂಲಕ ಸಂಪುಟ ಸೇರಲು ಹರಸಾಹಸ ನಡೆಸುತ್ತಿದ್ದಾರೆ. ಆದರೆ ಅದಕ್ಕೆ ಡಿ.ಕೆ.ಶಿವಕುಮಾರ್ ಕ್ಯಾರೆ ಎನ್ನುತ್ತಿಲ್ಲ.

ಜಮೀರ್ ಅಹಮದ್ ಖಾನ್ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ವಿವಾದದ ಕೇಂದ್ರ ಬಿಂದುವಾಗಿದ್ದರು. ನಾಯಕತ್ವದ ವಿಚಾರವಾಗಿ ಪದೇ ಪದೇ ಸಿದ್ದರಾಮಯ್ಯ ಅವರ ಪರವಾಗಿ ಬ್ಯಾಟಿಂಗ್ ಮಾಡಿ ಗೊಂದಲ ಮೂಡಿಸುತ್ತಿದ್ದರು.

ಹೈಕಮಾಂಡ್ ಎಚ್ಚರಿಕೆ ನೀಡಿದ ಹೊರತಾಗಿಯೂ ಜಮೀರ್ ತಮ ವರಸೆಯನ್ನು ಬದಲಿಸಿಕೊಂಡಿರಲಿಲ್ಲ, ವಸತಿ ಇಲಾಖೆ ನಿರ್ವಹಣೆ ಮಾಡುತ್ತಿದ್ದ ಜಮೀರ್ ಅವರ ಆಪ್ತ ಸಹಾಯಕರ ಮೇಲೆ ಗಂಭೀರ ಆರೋಪವೊಂದು ಕೇಳಿ ಬಂದಿತು. ಬಡವರಿಗೆ ಮನೆ ಮಂಜೂರಾತಿ ಮಾಡಲು ಲಂಚ



ಕೇಳಲಾಗುತ್ತಿದೆ ಎಂದು ಆಡಳಿತ ಪಕ್ಷದ ಶಾಸಕ ಹಾಗೂ ಸಿದ್ದರಾಮಯ್ಯ ಅವರ ಆಪ್ತ ಬಿ.ಆರ್.ಪಾಟೀಲ್ ಟೀಕೆ ಮಾಡಿದ್ದರು. ಸಂಧಾನ ಸಭೆ ಮೂಲಕ ಆರೋಪವನ್ನು ಮರೆಮಾಚಲಾಯಿತು.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೂ ಮುನ್ನ ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗೆ ಟಿಕೆಟ್ ನೀಡಬೇಕೆಂದು ಜಮೀರ್ ಪಟ್ಟುಹಿಡಿದಿದ್ದರು. ಹಾಲಿ ಶಾಸಕ ಶ್ಯಾಮನೂರು ಶಿವಶಂಕರಪ್ಪ ಅವರು ಮೃತಪಟ್ಟ ಹಿನ್ನೆಲೆಯಲ್ಲಿ ಅವರ ಕುಟುಂಬದ ಸದಸ್ಯರಿಗೆ ಟಿಕೆಟ್ ನೀಡಬೇಕೆಂಬ ಕಾರಣಕ್ಕಾಗಿ ಹೈಕಮಾಂಡ್, ಸಮರ್ಥ ಶ್ಯಾಮನೂರ್‌ಗೆ ಸ್ಪರ್ಧೆ ಮಾಡಲು ಅವಕಾಶ ಕಲ್ಪಿಸಿತು. ಆದರೆ ಚುನಾವಣೆ ಸಂದರ್ಭದಲ್ಲಿ ಜಮೀರ್ ಅಹಮದ್ ಖಾನ್ ಕ್ಷೇತ್ರದಲ್ಲಿ ಅತೀ ಹೆಚ್ಚಿನ ಸಂಖ್ಯೆಯಲ್ಲಿರುವ ಮುಸ್ಲಿಮರಿಗೆ ಕಾಂಗ್ರೆಸ್‌ಗೆ ವಿರುದ್ಧವಾಗಿ ಮತ ಚಲಾಯಿಸುವಂತೆ ಕರೆ ನೀಡಿದ್ದರು ಎಂಬ ಆರೋಪಗಳಿವೆ. ಈ ಕುರಿತ ಆಡಿಯೋ ಒಂದು ಭಾರೀ ವೈರಲ್ ಆಗಿತ್ತು.

ನಾಯಕತ್ವದ ಬದಲಾವಣೆ ಬಳಿಕ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುವ ಸಂದರ್ಭದಲ್ಲಿ ಹೊಸ ಸರ್ಕಾರ ರಚನೆಯ ವೇಳೆ ಈ ಆಡಿಯೋ ಪ್ರಕರಣ ಜಮೀರ್ ಅವರನ್ನು ಸಂಪುಟದಿಂದ ದೂರ ಇಡುವಂತೆ ಮಾಡಿತು. ತಾವು ಅಲ್ಪಸಂಖ್ಯಾತ ಸಮುದಾಯದ ಪರಮೋಚ್ಚ ನಾಯಕರಾಗಿದ್ದು ತಮನ್ನು ಬಿಟ್ಟು ಸರ್ಕಾರ ರಚನೆ ಸಾಧ್ಯವಿಲ್ಲ ಎಂಬ ಲೆಕ್ಕಾಚಾರದಲ್ಲಿದ್ದ ಜಮೀರ್‌ಗೆ, ಡಿ.ಕೆ.ಶಿವಕುಮಾರ್ ಮರ್ಮಾಘಾತ ನೀಡಿದ್ದರು.

ವಿಧಾನಸಭಾಧ್ಯಕ್ಷರಾಗಿದ್ದ ಯು.ಟಿ.ಖಾದರ್ ಅವರನ್ನು ಸಂಪುಟಕ್ಕೆ ಸೇರಿಸಿಕೊಳ್ಳುವ ಮೂಲಕ ಜಮೀರ್ ಅವರಿಗೆ ತ್ರಿಶಂಕು ಸ್ಥಿತಿ ಕಾಣಿಸಿದ್ದರು. ಇತ್ತೀಚೆಗೆ ಸಿದ್ದರಾಮಯ್ಯ ಅವರು ಜಮೀರ್ ವಿರುದ್ಧ ಬಹಿರಂಗ ಅಸಮಾಧಾನ ವ್ಯಕ್ತಪಡಿಸಿದ್ದರಿಂದಾಗಿ ರಾಜಕೀಯವಾಗಿ ತೀವ್ರ ಹಿನ್ನಡೆ ಅನುಭವಿಸುವಂತಾಗಿದೆ. ಹೀಗಾಗಿ ತಾವು ಪಕ್ಷ ವಿರೋಧಿ ಚಟುವಟಿಕೆ ನಡೆಸಿಲ್ಲ ಎಂದು ಸಾಬೀತು ಪಡಿಸಲು ಜಮೀರ್ ನಾಯಕರ ಮನೆಮನೆ ಸುತ್ತುತ್ತಿದ್ದಾರೆ.

ಮೂರು ದಿನಗಳಲ್ಲಿ ಎರಡನೇ ಬಾರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದರು. ಅವರ ಸೂಚನೆ ಮೇರೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿ ಚರ್ಚೆ ನಡೆಸಿದ್ದರು. ಆದರೆ ಎಲ್ಲಾ ಕಡೆಯಲ್ಲೂ ನಕಾರಾತಕ ಉತ್ತರ ಬಂದಿದ್ದರಿಂದ ಈಗ ಕೊನೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನೇ ಭೇಟಿ ಮಾಡಿದ್ದಾರೆ. ಎಲ್ಲರ ಬಳಿಯೂ ಮಂತ್ರಿಸ್ಥಾನ ನೀಡುವಂತೆ ದುಂಬಾಲು ಬಿದ್ದಿದ್ದಾರೆ.

ಕೆಳ ದಿನಗಳ ಹಿಂದಷ್ಟೆ ಜಮೀರ್ ಅವರು ಯಾರ ಮಾತಿಗೂ ಕವಡೆ ಕಾಸಿನ ಕಿಮತ್ತು ನೀಡದೆ, ಪದೇ ಪದೇ ವಿವಾದಾತಕ ಹೇಳಿಕೆಗಳನ್ನು ನೀಡಿ ಗೊಂದಲ ಮೂಡಿಸುತ್ತಿದ್ದರು. ಈಗ ಅದೇ ಜಮೀರ್ ಅಹಮದ್ ಖಾನ್ ಸಚಿವ ಸ್ಥಾನಕ್ಕಾಗಿ ಬೆಂಬಲಿಗರ ಮೂಲಕ ಪ್ರತಿಭಟನೆ ನಡೆಸುವುದು, ಹಿರಿಯ ನಾಯಕರ ಮನೆ ಬಾಗಿಲಿಗೆ ಹೋಗಿ ಅಂಗಲಾಚುವ ಪರಿಸ್ಥಿತಿಗೆ ತಲುಪಿದ್ದಾರೆ.

ಯೋಗವನ್ನು ಕಲಿಯಿರಿ ಆರೋಗ್ಯವಂತರಾಗಿರಿ ಬಿಕೆ ಸ್ಮಿತಾ ಅಕ್ಕ

ರಾಯಚೂರು,ಜೂ.14-

ಪ್ರತಿವರ್ಷದಂತೆ ಈ ವರ್ಷ ಜೂನ್ 21ರಂದು ಯೋಗ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತದೆ.ಈ ಹಿನ್ನೆಲೆಯಲ್ಲಿ ಜಿಲ್ಲಾ ಆಯುಷ್ ಇಲಾಖೆಯ ವೈದ್ಯರು ಇಂದು ನಮ್ಮ ಕೇಂದ್ರಕ್ಕೆ ಬಂದು ಯೋಗ ಕುರಿತು ಮಾಹಿತಿಯನ್ನು ನೀಡುತ್ತಾರೆ .ಜೊತೆಗೆ ಯೋಗಾಭ್ಯಾಸದ ಬಗ್ಗೆ ಮಾತನಾಡುತ್ತಾರೆ. ಯೋಗದ ಆಸನಗಳ ಕುರಿತು ನಮ್ಮ ಮುಂದೆ ಪ್ರಾತ್ಯಕ್ಷಿತವಾಗಿ ಮಾಡುತ್ತಾರೆ. ಪ್ರತಿಯೊಬ್ಬರು ದಿನನಿತ್ಯ ಯೋಗವನ್ನು ಮಾಡಬೇಕು ಯೋಗದಿಂದ ಮಾನಸಿಕ ಶಕ್ತಿ ಬರುತ್ತದೆ . ಯುಗ ರೋಗವನ್ನು ದೂರ ಮಾಡುತ್ತದೆ .ಯೋಗ ಮನುಷ್ಯನ ಆರೋಗ್ಯದ ಸೋಪಾನ.



ಶಾರೀರಿಕ ಮಾನಸಿಕ ಆರೋಗ್ಯಕ್ಕೆ ಯೋಗಭ್ಯಾಸ ಒಳ್ಳೆಯದು. ಯೋಗವನ್ನು ಕಲಿಯಿರಿ ಆರೋಗ್ಯವಂತ ಆರೋಗ್ಯವಂತವಾಗಿರಿ ಎಂದು ದಿನಾಂಕ 14 06.2026ರಂದು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆಯುಷ್ ಇಲಾಖೆ ಹಾಗೂ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯ ಇವರ ಆಶ್ರಯದಲ್ಲಿ ನಡೆದ ಯೋಗ ಕುರಿತು ಕಾರ್ಯಾಗರದಲ್ಲಿ ರಾಜಯೋಗಿನಿ ಬಿ.ಕೆ ಸ್ಮಿತಾ ಅಕ್ಕನವರು ಹಸಿಗೆ ನೀರಾಕುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕರಾದ ಡಾ .ದಂಡಪ್ಪ ಬಿರಾದಾರ ಮಾತನಾಡುತ್ತಾ. ಮನೋ ನಿಗ್ರಕೆ ಯೋಗ ಸಾಧನೆ ನೀಡುತ್ತದೆ,. ಮನುಷ್ಯನಲ್ಲಿರುವ ಜಡತ್ವವನ್ನು ನಿವಾರಣೆ ಮಾಡುವ ಶಕ್ತಿ ಯೋಗಕೆ ಇದೆ. ಪ್ರತಿನಿತ್ಯ ಯೋಗ ಮಾಡಿ ನಿರೋಯಾಗಿರಿ ಯೋಗದ ಸಾಧನೆ ಅಭ್ಯಾಸ ಉದ್ವವಿಗಕ್ಕೆ ಕೆಡುವಾಣ ಹಾಕುವ ಶಕ್ತಿ ಇದೆ, ಅಲಸ್ಯದಿಂದಲೇ

3ನೇ ಪುಟಕ್ಕೆ

ಬಸನಗೌಡ ಬಾದರ್ಲಿ ಗೆ ಸಚಿವ ಸ್ಥಾನ ದೊರೆಯಲೆಂದು ಅಭಿಮಾನಿಗಳಿಂದ ಬೈಕ್ ರ‍್ಯಾಲಿ ಹಾಗೂ ವಿಶೇಷ ಪೂಜೆ

ಸಿಂಧನೂರು,ಜೂ.14-

ಶನಿವಾರ. 13-6-2026. ಎಂಎಲ್ಸಿ ಬಸನಗೌಡ ಬಾದರ್ಲಿ ಅಭಿಮಾನಿಗಳು. ಕಾರ್ಯಕರ್ತರು. ಬಸನಗೌಡ ಬಾದರ್ಲಿ ಅವರಿಗೆ. ಮುಖ್ಯಮಂತ್ರಿ ಶ್ರೀ ಡಿಕೆ ಶಿವಕುಮಾ್ರ ಅವರ ಸಚಿವ ಸಂಪುಟದಲ್ಲಿ. ಸಚಿವ ಸ್ಥಾನ ದೊರೆಯಲಿ ಎಂದು ಸಿಂಧನೂರು ತಾಲೂಕಿನ ದಿದ್ದಿಗಿ ಗ್ರಾಮದಿಂದ. ರಾಮತ್ನಾಳ. ಬನ್ನಿಗನೂರು. ಮಾರ್ಗವಾಗಿ. ಯಾಪಲ್ ಪರ್ವಿ. ವಲ್ಕಂ ದಿನ್ನಿ. ರಾಗಲಪರ್ವಿ. ಪುಲದಿನ್ನಿ. ಧೂಮತಿ. ಗೋನವಾರ. ಹುಲಗುಂಚಿ. ಆಯನೂರು. ಚಿಂತಮಾನ ದೊಡ್ಡಿ. ಚಿತ್ರಾಲಿ. ಪು ಲಮೇಶ್ವರ ದಿನ್ನಿ. ಹೆಡಿಗಿನಾಳ. ಒಳ ಬಳ್ಳಾರಿ. ಗಿಣಿವಾರ. ಬಾದರ್ಲಿ. ಹರಟನೂರು. ಅಲಬನೂರು. ಬೆಳಗುರ್ಕಿ. ಮಾಡಸಿರುವಾರ. ಗೋಮರ್ಸಿ. ಉದ್ಬಾಳ ಇ ಜೆ. ಹಾಗೂ ಜೋಳದ ರಾಶಿ. ಶ್ರೀ ಆಂಜನೇಯ ದೇವಸ್ಥಾನದವರೆಗೆ ಸಾವಿರಾರು ಅಭಿಮಾನಿಗಳು. ಬೈಕ್ ರ್ಯಾಲಿಯ ಮುಖಾಂತರ ಬಂದು. ಶ್ರೀ ಆಂಜನೇಯ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ. 51 ತೆಂಗಿನ ಕಾಯಿ ಒಡೆಯುವುದರ ಮೂಲಕ ಹರಕೆಯನ್ನು ಸಲ್ಲಿಸಲಾಯಿತು. ಈ ವೇಳೆ ಮುಖಂಡರಾದ. ಶರಣಯ್ಯ ಸ್ವಾಮಿ ಕೋಟೆ. ವೆಂಕಟೇಶ್ ರಾಗಲಪರ್ವಿ. ಹೊನ್ನನಗೌಡ ಬೆಳಗುರ್ಕಿ. ಖಾಜಾ ಹುಸೇನ್ ರೌಡಕುಂದ. ಪಂಪಾಪತಿ ಅಲಬನೂರು. ವೀ ರಾಜು. ಚೆನ್ನಪ್ಪ ಅಗಸಿ. ಹಬೀಬ್ ಖಾಜಿ. ಯೂಸುಫ್ ಎತ್ಮಾರಿ. ಶಹಬಾಸ್ ಬೇಗ. ಹನುಮೇಶ್ ಕರ್ನಿ.



ಅಮರೇಶ್ ಗಿರಿಜಾಲಿ. ಶಾಮಿದ್ ಸಾಬ್. ಆದನಗೌಡ. ಪ್ರಕಾಶ್ ಸೋಮಲಾಪುರ. ದಾದಾಪೀ್ರ ಯೂನುಸ್ ಪಾಷಾ. ಪ್ರಕಾಶ್ ಗೌಡ ನಾಗರಾಜ. ಸಂತೋಷ್ ಅಮರೇಗೌಡ. ಹಾಗೂ ಇತರರು ಉಪಸ್ಥಿತರಿದ್ದರು.

ಸಚಿವ ಸ್ಥಾನಕ್ಕಾಗಿ ಪೈಪೋಟಿಯಲ್ಲಿ ಸಿಂಧನೂರಿನ ಅಭಿವೃದ್ಧಿಗೆ ಕಡೆಗಣನೆ

ಸಿಂಧನೂರು,ಜೂ.14

ಸಿಂಧನೂರು ಕ್ಷೇತ್ರದ ಅಭಿವೃದ್ಧಿಗೆ. ರೈತರ ಸಮಸ್ಯೆಗಳು ಹಾಗೂ ಜೋಳದ ಖರೀದಿ ಬಾಕಿ ಮೊತ್ತದ ಬಿಡುಗಡೆಗೆ. ಆದ್ಯತೆ ನೀಡಬೇಕಾದ ಜನಪ್ರತಿನಿಧಿಗಳು ಸಚಿವ ಸ್ಥಾನಕ್ಕಾಗಿ ರಾಜಕೀಯ ಪೈಪೋಟಿಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಮಾಜಿ ಸಚಿವ ವೆಂಕಟರಾವ್ ನಾಡಗೌಡರು ಆರೋಪಿಸಿದರು.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋ ಷ್ಠಿಯಲ್ಲಿ ಮಾತನಾಡಿದ ಅವರು. ಕ್ಷೇತ್ರದ ರೈತರು ಜೋಳ ಖರೀದಿ ಬಾಕಿ ಮೊತ್ತ ಬಿಡುಗಡೆಗಾಗಿ ಹಲವು ತಿಂಗಳುಗಳಿಂದ ಕಾಯುತ್ತಿದ್ದಾರೆ. ಅನೇಕ ಅಭಿವೃದ್ಧಿ ಕಾಮಗಾರಿಗಳು ಕುಂಠಿತಗೊಂಡಿದ್ದು. ಜನಸಾಮಾನ್ಯರು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಆದರೆ ಈ ಸಮಸ್ಯೆಗಳ ಪರಿಹಾರಕ್ಕೆ



ಮುಂದಾಗಬೇಕಾದ ಸ್ಥಳೀಯ ನಾಯಕರು. ಅಧಿಕಾರ ಹಾಗೂ ಸಚಿವ ಸ್ಥಾನ ಪಡೆಯುವ ರಾಜಕೀಯ ಚಟುವಟಿಕೆಗಳಲ್ಲಿ ತಲ್ಲೀನರಾಗಿದ್ದಾರೆ. ಕ್ಷೇತ್ರದ ಅಭಿವೃದ್ಧಿ ಹಾಗೂ ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಸಚಿವ ಸ್ಥಾನದ ಲಾಭಿ ನಡೆಸಿ. ಬೆಂಗಳೂರು ಮತ್ತು ದೆಹಲಿಗೆ ನಿರಂತರ ಓಡಾಟ ನಡೆಸುತ್ತಿದ್ದಾರೆ ಎಂದು ಅವರು ಟೀಕಿಸಿದರು.

ಸಿಂಧನೂರು ಕ್ಷೇತ್ರದ ಜನತೆ ರಸ್ತೆ ಮತ್ತು ಕುಡಿಯುವ ನೀರು. ಉದ್ಯೋಗ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಎಂತಹ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಕ್ಷೇತ್ರದ ಅಭಿವೃದ್ದಿಗೆ ಒತ್ತು ನೀಡುವ ಬದಲು. ಸಚಿವ ಸ್ಥಾನಕ್ಕಾಗಿ ರಾಜಕೀಯ ಪೈಪೋಟಿಯಲ್ಲಿ ತೊಡಗಿರುವುದು ಜನರ ನಿರೀಕ್ಷೆಗಳಿಗೆ ವಿರುದ್ಧವಾಗಿದೆ ಎಂದು ಅವರು ಹೇಳಿದರು.

ಕ್ಷೇತ್ರದ ಅಭಿವೃದ್ಧಿಯ ವಿಚಾರದಲ್ಲಿ ಶಾಸಕರು. ವಿಧಾನಪರಿಷತ್ ಸದಸ್ಯರು ಹಾಗೂ ಸರಕಾರದ ಪ್ರತಿನಿಧಿಗಳು ಸೇರಿದಂತೆ ಎಲ್ಲರೂ ಜವಾಬ್ದಾರಿತವಾಗಿ ಕಾರ್ಯನಿರ್ವಹಿಸಬೇಕು. ಜೋಳ ಕರಿದಿ ಬಾಕಿ ಮೊತ್ತವನ್ನು ತಕ್ಷಣ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಒತ್ತಾಯಿಸಬೇಕು. ಮತ್ತು ರೈತರಿಗೆ ಸಮರ್ಪಕವಾಗಿ ಬೀಜ ಮತ್ತು ಗೊಬ್ಬರಗಳ ಕೊರತೆಯಾಗದಂತೆ ಕ್ರಮ ಕೈಗೊಳ್ಳಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಜನಪ್ರತಿನಿಧಿಗಳ ಮೊದಲ ಕರ್ತವ್ಯವಾಗಿದೆ. ಸಿಂಧನೂರಿನ ಅಭಿವೃದ್ಧಿ ಹಾಗೂ ರೈತರ ಹಿತಾಸಕ್ತಿಯನ್ನು ಮುಂದಿಟ್ಟುಕೊಂಡು ಎಲ್ಲಾ ನಾಯಕರು ಪಕ್ಷ ಭೇದ ಮರೆತು ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸಬೇಕಾಗಿದೆ ಎಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ. ಮುಖಂಡರಾದ.ಜಿ. ಸತ್ಯನಾರಾಯಣ. ಚಂದ್ರು ಮೈಲಾ್ರ ವೆಂಕೋಬ ಕಲ್ಲೂ್ರ ದಾಸರೀ ಸತ್ಯನಾರಾಯಣರಾವ್. ಅಲ್ಲಮ ಪ್ರಭು ಪೂಜಾರ. ಎಸ್. ಪಿ. ಟೈಲ್ರ ರವಿಕುಮಾರ್ ಪನ್ನೂ್ರ ಸುಮಿತ್ ತಡಕಲ್. ಅಜಯ್ ದಾಸರಿ. ಎಸ್. ಬಿ. ರೆಡ್ಡಿ . ಸೈಯದ್ ಆಸಿಫ್. ಸೇರಿದಂತೆ ಇತರರು ಉಪಸ್ಥಿತರಿದ್ದರು.



ಪ್ರತಿ ವರ್ಷದಂತೆ ಜೂನ್ 14ರಂದು ಶ್ರೀ ವರಸಿದ್ಧಿ ಆಂಜನೇಯ ಸ್ವಾಮಿ ದೇವಸ್ಥಾನದ ಅಧ್ಯಕ್ಷರು ಮತ್ತು ನವೋದಯ ಶಿಕ್ಷಣ ಮಹಾವಿದ್ಯಾಲಯದ ಆಡಳಿತ ಸಹಯೋಜಕರಾದ ಡಾ. ರಾಜಶಂಕರ್ ಇವರ ಹುಟ್ಟು ಹಬ್ಬದ ಪ್ರಯುಕ್ತ ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ವಿರೋಧಿ ಸಂಸ್ಥೆ ರಾಯಚೂರು ಹಾಗೂ ವಲಯ ಅರಣ್ಯ ಇಲಾಖೆ ರಾಯಚೂರು ಮತ್ತು ವೀರಶೈವ ಲಿಂಗಾಯತ ಸಮಾಜ ರಾಯಚೂರು ವತಿಯಿಂದ 100 ಗಿಡಗಳ ನಡೆಯುವ ಕಾರ್ಯಕ್ರಮ ಶ್ರೀ ರಾಮಲಿಂಗೇಶ್ವರ ದೇವಸ್ಥಾನ ಮೈದಾನದಲ್ಲಿ ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮಕ್ಕೆ ವೀರಶೈವ ಲಿಂಗಾಯತ ಸಮಾಜದ ಗಣ್ಯ ವ್ಯಕ್ತಿಗಳಾದ ಕೆ ಎಂ ಪಾಟೀಲ್.ಶ್ರೀ ಶರಣರೆಡ್ಡಿ ಜನಾರ್ದನ್ ರೆಡ್ಡಿ ಅಂಹನಳ. ವಿಜಯ್ ಭಾಸ್ಕರ್ ರೆಡ್ಡಿ. ಮತ್ತು ಅರಣ್ಯ ಅಧಿಕಾರಿಗಳಾದ ಶ್ರೀ ರಾಜೇಶ್ ನಾಯಕ್, ಮೌನೇಶ್, ಭೀಮೇಶ್ ಶಿಲ್ಪ ಮೇಡಂ,ಹಾಗೆ ಹನುಮಾನ್ ಚಾಲೀಸ್ ಜನಸೇವ ಅಧ್ಯಕ್ಷರು ವೀರೇಶ್.ಪಿ, ಶ್ರೀ ವರಸಿದ್ಧಿ ಆಂಜನೇಯ ದೇವಸ್ಥಾನದ ಕಾರ್ಯದರ್ಶಿ ರವಿಕಿರಣ್ ಗೌಡ ರಾಘವೇಂದ್ರ, ಸದಸ್ಯರುಗಳಾದ ಲಕ್ಷ್ಮಣ್ ಮಾಸ್ಟರ್ ಶಾಂತಯ್ಯ ಸ್ವಾಮಿಗಳು.. ಇನ್ನಿತರು ಭಾಗಿಯಾಗಿದ್ದರು

ಲಿಂಗಸ್ಗೂರು ತಾಲೂಕಿನಲ್ಲಿ ಬಂಜಾರ ಸಮಾಜದ ವರದಕ್ಷಿಣೆ ನಿಷೇದ ಸಭೆ

ಲಿಂಗಸುಗೂರು,ಜೂ.14-

ತಾಲ್ಲೂಕಿನಲ್ಲಿ ಪತ್ರಿಕೆ ಭವನದಲ್ಲಿ ಬಂಜಾರ ಸಮಾಜದ ಸಂಘದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ವೆಂಕಟೇಶ್ ಎನ್ ರಾಠೋಡ್ ರವರ ನೇತೃತ್ವದಲ್ಲಿ ಬಂಜಾರ ಸಮಾಜದಲ್ಲಿ ವರದಕ್ಷಣೆ ನಿಷೇಧ ಮಾಡಬೇಕೆಂದು ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ..ಆದರಿಂದ ನಮ್ಮ ತಾಲೂಕಿನ ಎಲ್ಲಾ ತಾಂಡದ ನಾಯಕ ಕಾರಬಾರಿ ಗುರು ಹಿರಿಯರು ಯುವಕರು ಶಿಕ್ಷಣ ಪ್ರೇಮಿಗಳು, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು, ತಾಲೂಕು ಪಂಚಾಯತ್ ಸದಸ್ಯರು, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು.. ರಾಜಕೀಯ ಮುಖಂಡರು ದಿನಾಂಕ =20/06/



2026 ಶನಿವಾರ ರಂದು ಕಾಳಾಪುರ ಕ್ರಾಸ್ ಶ್ರೀ ಸೇವಾಲಾಲ್ ಭವನದಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ರಾಜ್ಯ ಜಂಟಿ ಕಾರ್ಯದರ್ಶಿಯಾದ ಶ್ರೀ ದೇವಪ್ಪ ರಾಠೋಡ, ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ಲಾಲಪ್ಪ ರಾಥೋಡ್, ತಾಲೂಕು ಗೌರವ ಅಧ್ಯಕ್ಷರು ಶ್ರೀ ಲಕ್ಷ್ಮಣ ರಾಟೋಡ್, ತಾಲೂಕು ಉಪಾಧ್ಯಕ್ಷರಾದ ಶ್ರೀ ಚಂದ್ರು ಎಲ್ ಬಾಣುತ್, ತಾಲೂಕು ಪ್ರಧಾನ ಕಾರ್ಯದರ್ಶಿ ಶ್ರೀ ನೀಲೇಶ ಪವಾ್ರ ತಾಲೂಕು ಖಜಾಂಚಿ ಶ್ರೀ ಚೆಲುವಪ್ಪ ಚೌಹಾಣ್, ನಗರ ಘಟಕದ ಅಧ್ಯಕ್ಷರಾದ ಶ್ರೀ ಚಂದು ರಾಠೋಡ,ಗುರುಗುಂಟ ಹೋಬಳಿ ಮಟ್ಟದ ಅಧ್ಯಕ್ಷರಾದ ಶ್ರೀ ಮುಖೇಶ್ ಚೌವಾಣ್, ಮುದುಗಲ್ ಘಟಕದ ಅಧ್ಯಕ್ಷರಾದ ಶ್ರೀ ಪದ್ಮರಾಜ್ ನಾಯಕ್ ಹಾಗೂ ಸಮಾಜದ ಇತರ ಮುಖಂಡರು ಉಪಸ್ಥಿತರಿದ್ದರು.

ಸಿಎಂ ಶಿವಕುಮಾರ್ ರೈತರ ಬದಲು ರಿಯಲ್ ಎಸ್ಟೇಟ್ ಪರವಾಗಿ ಕೆಲಸ ಮಾಡುತ್ತಿದ್ದಾರೆ : ವಿಜಯೇಂದ್ರ

ಬೆಂಗಳೂರು,ಜೂ.14- ರೈತರ ಪರವಾಗಿ ಕೆಲಸ ಮಾಡುವ ಬದಲು ಕಾಂಗ್ರೆಸ್ ಸರ್ಕಾರ ಮತ್ತು ಸಿಎಂ ಶಿವಕುಮಾರ್ ರಿಯಲ್ ಎಸ್ಟೇಟ್ ಪರವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಆರೋಪಿಸಿದ್ದಾರೆ.

ಜಿಬಿಐಟಿ ಯೋಜನೆಗಾಗಿ 499 ಎಕರೆ ಭೂಸ್ವಾಧೀನ ವಿಚಾರದಲ್ಲಿ ಸಿಎಂ ರೈತರೊಂದಿಗೆ ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿಡದಿ ಟೌನ್ ಶಿಪ್ ಯೋಜನೆ ಕೈಗೆತ್ತಿಕೊಳ್ಳುವ ಮುನ್ನ ರೈತರ



ಜೊತೆ ಕುಳಿತು ಚರ್ಚಿಸಿ ನಿಜವಾದ ಸಮಸ್ಯೆ ಏನು ಎಂಬುದನ್ನು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅರ್ಥೈಸಿಕೊಳ್ಳಲಿ. ಶೇಕಡಾ 90ಕ್ಕಿಂತ ಹೆಚ್ಚು ಮಂದಿ ರೈತರು ತಮ ಜಮೀನನ್ನು ಸರ್ಕಾರಕ್ಕೆ ಬಿಟ್ಟುಕೊಡಲು ತಯಾರಾಗಿಲ್ಲ ಎಂದರು.

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ನಿರ್ವಹಣೆ ಬಗ್ಗೆ ಟೀಕಿಸಿದ ಬಿ ವೈ ವಿಜಯೇಂದ್ರ, ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಪಕ್ಷವು ಸಾಕಷ್ಟು ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದಿತ್ತು. ಆದರೆ, ಈಗ ಗ್ಯಾರಂಟಿಗಳು ಸರಿಯಾಗಿ ತಲುಪುತ್ತಿಲ್ಲ ಮತ್ತು ಸರ್ಕಾರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ ಎಂದು ಆರೋಪಿಸಿದರು.

ಗೃಹಲಕ್ಷ್ಮಿ ಯೋಜನೆಯನ್ನು 4-5 ತಿಂಗಳುಗಳ ಕಾಲ ತಡೆಹಿಡಿದು, ಚುನಾವಣೆ ಬಂದಾಗ ಚುನಾವಣಾ ಲಕ್ಷ್ಯಯನ್ನಾಗಿ ಪರಿವರ್ತಿಸಲಾಗುತ್ತಿದೆ. ಅಲ್ಲದೆ, ಗ್ಯಾರಂಟಿಗಳಿಂದ ಉಂಟಾದ ಆರ್ಥಿಕ ಸಂಕಷ್ಟವನ್ನು ನಿಭಾಯಿಸಲು ಲಕ್ಷಾಂತರ ಫಲಾನುಭವಿಗಳನ್ನು ಕಡಿತಗೊಳಿಸುವ ದುಸ್ಸಾ ಹಸಕ್ಕೆ ಸರ್ಕಾರ ಕೈ ಹಾಕಿದೆ ಎಂದು ಟೀಕಿಸಿದರು. ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಈ ಭಾಗದ ರೈತರು ಜೂ.22ರಂದು ಬೃಹತ್ ಪ್ರತಿಭಟನೆ ನಡೆಸಲು ಮುಂದಾಗಿದ್ದಾರೆ ಎಂದು ಇದೇ ವೇಳೆ ಅವರು ತಿಳಿಸಿದರು.

ಮಾರ್ಚ್ 2027ರೊಳಗೆ ಕುಷ್ಟಗಿ 400 ಕೆವಿ ಉಪಕೇಂದ್ರ ಕಾಮಗಾರಿ ಪೂರ್ಣಗೊಳಿಸಿ: ಕೆಪಿಟಿಸಿಎಲ್ ಎಂಡಿ ಡಾ.ವಿ.ರಾಮ್ ಪ್ರಸಾತ್ ಮನೋಹರ್ ಸೂಚನೆ



ಕೊಪ್ಪಳ ಜೂ.14

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಅವರು ಜೂನ್ 11ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಕೊಪ್ಪಳ ಜಿಲ್ಲೆಯ ಕುಷ್ಟಗಿಯಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ 400ಕೆವಿ (ಇಎಚ್‌ವಿ) ವಿದ್ಯುತ್ ಉಪಕೇಂದ್ರದ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದರು.

ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮಾತನಾಡಿದ ಅವರು, ಉತ್ತರ ಕರ್ನಾಟಕದಲ್ಲಿ ಉತ್ಪಾದನೆಯಾಗುವ ನವೀಕರಿಸಬಹುದಾದ ಹಸಿರು ವಿದ್ಯುತ್ ಅನ್ನು ರಾಜ್ಯ ಹಾಗೂ ದೇಶದ ಇತರೆ ಭಾಗಗಳಿಗೆ ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಅತ್ಯಂತ ನಿರ್ಣಾಯಕವಾಗಿರುವ, ಕೊಪ್ಪಳ ಜಿಲ್ಲೆಯ ಕುಷ್ಟಗಿಯಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ 400ಕೆವಿ ವಿದ್ಯುತ್ ಉಪಕೇಂದ್ರದ ಕಾಮಗಾರಿಯನ್ನು ಮಾರ್ಚ್ 2027ರೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಂಜೆ ವೇಳೆ ಜಿಲ್ಲಾಡಳಿತ ಭವನಕ್ಕೆ ಆಗಮಿಸಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್ ಅರಸಿದ್ದಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿದ ಡಾ. ರಾಮ್ ಪ್ರಸಾತ್ ಮನೋಹರ್ ಅವರು, ಈ ಬೃಹತ್ ಉಪಕೇಂದ್ರಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು (ಸ್ಟೇಷನ್ ಚಾರ್ಜ್ ಮಾಡಲು) ಡೋಣಿ-ಕುಷ್ಟಗಿ ಫೀಡರ್ ಮಾರ್ಗವು ಅತ್ಯಂತ ಪ್ರಮುಖವಾಗಿದೆ. ಈ ಮಾರ್ಗವು ಹಸಿರು ಇಂಧನ ಸಾಗಣೆಯ (ಗ್ರೀನ್ ಎನರ್ಜಿ ಟ್ರಾನ್ಸ ಪೋರ್ಟೇಶನ್) ಜೀವನಾಡಿಯಾಗಿದ್ದು, ಇದು ಪೂರ್ಣಗೊಂಡರಷ್ಟೇ ಉಪಕೇಂದ್ರದ ಕಾರ್ಯಾರಂಭ ಸಾಧ್ಯವಾಗಲಿದೆ. ಆದರೆ, ಈ ಪ್ರಮುಖ ವಿದ್ಯುತ್ ಮಾರ್ಗದ ಕಾಮಗಾರಿಗೆ ಕೆಲವೆಡೆ ಮಾರ್ಗಾಧಿಕಾರ ಅಥವಾ ರೈಟ್ ಆಫ್ ವೇ (ಆರ್‌ಒಡಬ್ಲ್ಯು) ಸಮಸ್ಯೆಗಳು ಅಡ್ಡಿಯಾಗಿವೆ. ಈ ಪ್ರಸರಣ ಮಾರ್ಗಕ್ಕೆ ಎದುರಾಗಿರುವ ಎಲ್ಲಾ ಅಡೆತಡೆಗಳನ್ನು ನಿವಾರಿಸಲು ಎಂಜಿನಿಯರಿಂಗ್ ತಂಡಗಳಿಗೆ ಇದೆ ವೇಳೆ 3 ತಿಂಗಳ ಗಡುವು ವಿದಿಸಿದರು. ಭೂಮಿ ಮತ್ತು ಆರ್‌ಒಡಬ್ಲ್ಯು ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲು ಅಗತ್ಯವಿರುವ ಎಲ್ಲಾ ಆಡಳಿತಾತ್ಮಕ ಮತ್ತು ಪೊಲೀಸ್ ಭದ್ರತಾ ಸಹಕಾರವನ್ನು ಒದಗಿಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದರು.

ಈ ಹೊಸ ಉಪಕೇಂದ್ರವು ಸ್ಥಳೀಯ ಸೌರ ಮತ್ತು ಪವನ ವಿದ್ಯುತ್ ಸ್ಥಾವರಗಳಿಂದ ಉತ್ಪಾದನೆಯಾಗುವ ಬೃಹತ್ ಪ್ರಮಾಣದ ಹಸಿರು ಇಂಧನವನ್ನು ಸುಲಭವಾಗಿ ರಾಜ್ಯದ ಮುಖ್ಯ ಗ್ರಿಡ್‌ಗೆ ರವಾನಿಸುವ ಹೆಬ್ಬಾಗಿಲಾಗಿ ಕಾರ್ಯನಿರ್ವಹಿಸಲಿದೆ ಎಂದು ಅವರು ಅಧಿಕಾರಿಗಳಿಗೆ ಮನವರಿಕೆ ಮಾಡಿದರು.

ಉಪಕೇಂದ್ರದ ಕಾಮಗಾರಿಗಳು ಉತ್ತಮ ವೇಗದಲ್ಲಿ ಸಾಗುತ್ತಿವೆ. ಆದರೆ, ಫೀಡರ್ ಮಾರ್ಗವಿಲ್ಲದೆ ಸ್ಟೇಷನ್ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ. ಹಸಿರು ಇಂಧನ ಸಾಗಣೆಗೆ ಡೋಣಿಯಿಂದ ಕುಷ್ಟಗಿ ವಿದ್ಯುತ್ ಮಾರ್ಗವೇ ಜೀವಾಳ. ಮುಂದಿನ ಮೂರು ತಿಂಗಳೊಳಗೆ ಸ್ಥಳೀಯವಾಗಿ ಎದುರಾಗಿರುವ ಎಲ್ಲಾ ಆರ್‌ಒಡಬ್ಲ್ಯು ಸಮಸ್ಯೆಗಳನ್ನು ಬಗೆಹರಿಸಲು ನಾವು ನಿಗಾ ವಹಿಸಲಿದ್ದೇವೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನವನ್ನು ಯಶಸ್ವಿಯಾಗಿ ಸಂಯೋಜಿಸಲು ನಮ್ಮ ಪ್ರಸರಣ ಯೋಜನೆಗಳ ತ್ವರಿತ ಅನುಷ್ಠಾನ ಅತ್ಯಗತ್ಯವಾಗಿದೆ. ಕುಷ್ಟಗಿ 400ಕೆವಿ ಉಪಕೇಂದ್ರ ಹಾಗೂ ಅದಕ್ಕೆ ಸಂಪರ್ಕ ಕಲ್ಪಿಸುವ ಡೋಣಿ-ಕುಷ್ಟಗಿ ಮಾರ್ಗವು ಕಲ್ಯಾಣ ಕರ್ನಾಟಕ ಭಾಗದ ವಿದ್ಯುತ್ ಚಿತ್ರಣವನ್ನೇ ಬದಲಾಯಿಸಲಿವೆ. ಕೆಪಿಟಿಸಿಎಲ್ ಮತ್ತು ಜಿಲ್ಲಾಡಳಿತದ ನಡುವಿನ ಅತ್ಯುತ್ತಮ ಸಮನ್ವಯತೆಯ ಮೂಲಕ, ನಾವು ನಿಗದಿಪಡಿಸಿರುವ ಮಾರ್ಚ್ 2027ರ ಗಡುವಿನೊಳಗೆ ಯೋಜನೆ ಪೂರ್ಣಗೊಳ್ಳುವುದನ್ನು ಖಚಿತಪಡಿಸಿಕೊಳ್ಳುತ್ತಿದ್ದೇವೆ.

ಹಸಿರು ಇಂಧನ ಆಧಾರಿತ ಭವಿಷ್ಯವನ್ನು ನಿರ್ಮಿಸುವ ಸರ್ಕಾರದ ಬದ್ಧತೆಗೆ ಈ ತ್ವರಿತ ಆಡಳಿತಾತ್ಮಕ ಕ್ರಮಗಳೇ ಸಾಕ್ಷಿಯಾಗಿವೆ ಎಂದು ಕರ್ನಾಟಕ ಸರ್ಕಾರದ ಇಂಧನ ಸಚಿವರಾದ ಕೆ.ಜೆ.ಜಾರ್ಜ್ ಅವರು ತಿಳಿಸಿದ್ದು, ಈ ನಿಟ್ಟಿನಲ್ಲಿ ಕಾಮಗಾರಿಯ ಮಹತ್ವ ಅರಿತು ಅಗತ್ಯ ಸಹಕಾರ ನೀಡಬೇಕು ಎಂದು ಕೊಪ್ಪಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಡಾ.ವಿ.ರಾಮ್ ಪ್ರಸಾತ್ ಮನೋಹರ್ ಅವರು ಸೂಚಿಸಿದರು. ಜಿಲ್ಲಾಡಳಿತದೊಂದಿಗೆ ಜಂಟಿಯಾಗಿ ಕಾರ್ಯನಿರ್ವಹಿಸುವ ಮೂಲಕ ಮಾರ್ಚ್ 2027ರೊಳಗೆ ಸಂಪೂರ್ಣ ವ್ಯವಸ್ಥೆಯನ್ನು ಸಜ್ಜುಗೊಳಿಸಲಾಗುವುದು ಎಂದು ಅವರು ಹೇಳಿದರು.

ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಲೋಕ್ ಅದಾಲತ್ ಉತ್ತಮ ಅವಕಾಶ: ನ್ಯಾ. ಮಹಾಂತೇಶ ಎಸ್. ದರಗದ



ಕೊಪ್ಪಳ ಜೂನ.14-

ಜುಲೈ 11 ರಂದು ರಾಜ್ಯಾದ್ಯಂತ ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ತಮ್ಮ - ತಮ್ಮ ಇಲಾಖೆಯಿಂದ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ರಾಷ್ಟ್ರೀಯ ಲೋಕ್ ಅದಾಲತ್ ಉತ್ತಮ ಅವಕಾಶವಾಗಿದ್ದು, ಸಾರ್ವಜನಿಕರು, ಅಧಿಕಾರಿಗಳು ಇದರ ಸದುಪಯೋಗ ಪಡೆದುಕೊಳ್ಳ ಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್. ದರಗದ ಅವರು ತಿಳಿಸಿದರು. ಶುಕ್ರವಾರದಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಜುಲೈ 11 ರಂದು ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್‌ನ ಅಂಗವಾಗಿ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಹಳಷ್ಟು ಜನರಿಗೆ ಕಾನೂನಿನ ಅರಿವೇ ಇಲ್ಲ. ಈ ಕುರಿತು ನಾವೆಲ್ಲರೂ ಜನರಿಗೆ ಮಾಹಿತಿ ನೀಡುವ ಕೆಲಸ ಮಾಡಬೇಕು. ರಾಷ್ಟ್ರೀಯ ಲೋಕ ಅದಾಲತ್ ನಡೆಯುತ್ತಿರುವ ಕುರಿತು ಹೆಚ್ಚಿನ ಪ್ರಚಾರ ನೀಡಿ. ನಗರಸಭೆ ವಾಹನಗಳಲ್ಲಿ ಮತ್ತು ಬಸ್ ನಿಲ್ದಾಣಗಳಲ್ಲಿ ಹಾಗೂ ಪತ್ರಿಕೆಗಳಲ್ಲಿ ಈ ಕುರಿತು ಹೆಚ್ಚು ಪ್ರಚಾರ ಆಗಬೇಕು. ರಾಜಿ ಸಂಧಾನದ ಮೂಲಕ ಪ್ರಕರಣಗಳು ಇತ್ಯರ್ಥವಾದರೆ ಜನರ ಸಮಯ ಮತ್ತು ಅವರ ಸಂಬಧಗಳು ಉಳಿಯುತ್ತವೆ. ಈ ಸಲ ಹೆಚ್ಚು ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಇದ್ದು, ಇದಕ್ಕೆ ತಮ್ಮೆಲ್ಲರ ಸಹಕಾರ ಬೇಕಾಗುತ್ತದೆ ಎಂದು ಹೇಳಿದರು.

ಸಿವಿಲ್ ದಾವೆಗಳು, ಭೂ-ಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜಿ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳ ಬಹುದಾಗಿದೆ. ರಾಜಿ ಸಂಧಾನದಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡರೆ ಪ್ರಕರಣವು ಇಬ್ಬರಿಗೂ ಒಪ್ಪಿಗೆಯಾಗುವಂತೆ ಕೊನೆಗೊಂಡು ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣವಾಗಿ ವಾಪಸ್ ನೀಡಲಾಗುವುದು. ಆದ್ದರಿಂದ ಜುಲೈ 11 ರಂದು ರಾಜ್ಯದಾದ್ಯಂತ ನಡೆಯುವ ರಾಷ್ಟಿಯ ಲೋಕ್ ಅದಾಲತ್‌ನ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕೆಂದು ಅವರು ಹೇಳಿದರು.

ಮಾದಕ ವ್ಯಸನ ತಡೆಗಟ್ಟುವ ಕುರಿತು ಕಾರ್ಯಾಗಾರ: ಇದೇ ಸಂದರ್ಭ ಮಾದಕ ವ್ಯಸನ ತಡೆಗಟ್ಟುವ ಕುರಿತು ಎಲ್ಲ ಇಲಾಖೆಗಳ ಸಹಯೋಗದಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಳ್ಳುವ ಕುರಿತು ಚರ್ಚಿಸಲಾಯಿತು.

ಈ ಕುರಿತು ಮಾತನಾಡಿದ ನ್ಯಾ. ಮಹಾಂತೇಶ ದರಗದ ಅವರು, ಅಭಿವೃದ್ಧಿ ಹೊಂದಿದ ನಗರ ಪ್ರದೇಶ ಹಾಗೂ ಅಭಿವೃದ್ಧಿ ಹೊಂದುತ್ತಿರುವ ನಗರ, ಪಟ್ಟಣಗಳಲ್ಲಿ ಸದ್ದಿಲ್ಲದೆ ಮಾದಕ ವ್ಯಸನದ ಜಾಲ ಹರಡುತ್ತಿದೆ. ಚಾಕೋಲೇಟ್, ತಂಪು ಪಾನೀಯ ಮುಂತಾದ ಹಲವಾರು ರೂಪಗಳಲ್ಲಿ ಮಕ್ಕಳು, ಯುವಕರಿಗೆ ತಿಳಿಯದಂತೆ ಮಾದಕ ವಸ್ತುಗಳನ್ನು ಪೂರೈಸಲಾಗುತ್ತಿದೆ. ಇದು ಒಂದು ರೀತಿಯಲ್ಲಿ ನಿಶಬ್ದ ದೇಶದ್ರೋಹಿ ಕೃತ್ಯವಾಗಿದೆ. ಇದರಿಂದ ನಮ್ಮ ಮಕ್ಕಳನ್ನು ರಕ್ಷಿಸಬೇಕಿದೆ. ಇಂತಹ ಜಾಲಗಳಿಗೆ ಬಲಿಯಾಗದಂತೆ ಸೂಕ್ತ ತಿಳುವಳಿಕೆ ನೀಡುವ ಅಗತ್ಯವಿದೆ. ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳ ಮೂಲಕ ಮಕ್ಕಳನ್ನು ಎಚ್ಚರಿಸಬೇಕಿದೆ. ಸ್ವಸ್ಥ ಸಮಾಜದ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ ಎಂದು ಅವರು ಹೇಳಿದರು.

ಬಾಲಕಾರ್ಮಿಕ ಪದ್ಧತಿಗೆ ರೆಡ್ ಕಾರ್ಡ್ ತೋರಿಸಿ : ಅಪರ ಜಿಲ್ಲಾಧಿಕಾರಿ ಬಾಲಕೃಷ್ಣ



ವಿಜಯನಗರ,ಜೂ.13-

ಸಮಾಜದಲ್ಲಿ ಬಡತನವಿದ್ದರೂ ಅದನ್ನು ನಿವಾರಿಸಲು ಸರ್ಕಾರ ಪಂಚ ಗ್ಯಾರಂಟಿ ಹಾಗೂ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೆ ತಂದಿದೆ. ಹೀಗಿದ್ದೂ ಬಡತನದ ನೆಪವೊಡ್ಡಿ ಮಕ್ಕಳನ್ನು ಶಾಲೆಗೆ ಕಳುಹಿಸದೆ ಬಾಲಕಾರ್ಮಿಕರನ್ನಾಗಿ ದುಡಿಸಿಕೊಳ್ಳುವುದು ಗಂಭೀರ ಅಪರಾಧವಾಗಿದ್ದು, ಬಾಲಕಾರ್ಮಿಕ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣ ಕರೆ ನೀಡಿದರು.

ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆಗೆ 1986ರಲ್ಲಿಯೇ ಬಾಲಕಾರ್ಮಿಕ ವಿರೋಧಿ ಕಾಯ್ದೆ ಜಾರಿಗೆ ಬಂದಿದ್ದು, ನಂತರದ ತಿದ್ದುಪಡಿಗಳ ಮೂಲಕ ಅದನ್ನು ಮತ್ತಷ್ಟು ಬಲಪಡಿಸಲಾಗಿದೆ. ಮಕ್ಕಳನ್ನು ಕೆಲಸಕ್ಕೆ ನಿಯೋಜಿಸುವುದು ಕಾನೂನುಬಾಹಿರವಾಗಿದ್ದು, ಮೊದಲ ಬಾರಿ ಅಪರಾಧ ಎಸಗಿದವರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ಮರುಕಳಿಸಿದರೆ 2 ರಿಂದ 3 ವರ್ಷಗಳವರೆಗೆ ಕಠಿಣ ಶಿಕ್ಷೆ ವಿಧಿಸಲು ಅವಕಾಶವಿದೆ ಎಂದು ತಿಳಿಸಿದರು.

ಈ ವರ್ಷದ ಘೋಷವಾಕ್ಯ ಮಕ್ಕಳ ಕಾರ್ಮಿಕತೆಗೆ ರೆಡ್ ಕಾರ್ಡ್ ತೋರಿಸಿ, ಮಕ್ಕಳಿಗೆ ನ್ಯಾಯಯುತ ಬಾಲ್ಯ ವಯಸ್ಕರಿಗೆ ಘನತೆಯ ಉದ್ಯೋಗ ಕೇವಲ ಘೋಷಣೆಯಾಗದೆ ಕಾರ್ಯರೂಪಕ್ಕೆ ಬರಬೇಕು. ಯಾವುದೇ ಹೋಟೆಲ್, ಗ್ಯಾರೇಜ್ ಅಥವಾ ಅಪಾಯಕಾರಿ ಉದ್ಯಮಗಳಲ್ಲಿ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಳ್ಳಬಾರದು ಎಂದು ಎಚ್ಚರಿಸಿದರು.

ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಣವೇ ಪ್ರಮುಖ ಸಾಧನವಾಗಿದ್ದು, ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗದಂತೆ ನೋಡಿಕೊಳ್ಳು ವುದು ಸಮಾಜದ ಜವಾಬ್ದಾರಿಯಾಗಿದೆ. ಮಕ್ಕಳ ಹಕ್ಕುಗಳ ಕುರಿತು ಪೋಷಕರಲ್ಲಿ ಅರಿವು ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ತಮ್ಮ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಾಲಕಾರ್ಮಿಕರು ಕಂಡುಬಂದರೆ ತಕ್ಷಣ ಮಕ್ಕಳ ಸಹಾಯವಾಣಿ 1098ಕ್ಕೆ ಕರೆ ಮಾಡಿ ಮಾಹಿತಿ ನೀಡುವಂತೆ ಸಾರ್ವಜನಿಕರಿಗೆ ಮನವಿ ಮಾಡಿದ ಅವರು, ಮಾಹಿತಿ ನೀಡುವವರ ವಿವರವನ್ನು ಗೌಪ್ಯವಾಗಿಡಲಾಗುವುದು ಎಂದು ಭರವಸೆ ನೀಡಿದರು.

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕೇವಲ ಸರ್ಕಾರದಿಂದ ಮಾತ್ರ ಸಾಧ್ಯವಿಲ್ಲ. ಪಾಲಕರು, ಅಧಿಕಾರಿಗಳು, ನ್ಯಾಯಾಂಗ ವ್ಯವಸ್ಥೆ, ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರು ಒಗ್ಗೂಡಿ ಕಾರ್ಯನಿರ್ವಹಿಸಿದಾಗ ಮಾತ್ರ ಬಾಲಕಾರ್ಮಿಕ ಮುಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಸೂರ್ಯಪ್ಪ ಡೊಂಬರಮತ್ತೂರ ಅವರು ಬಾಲಕಾರ್ಮಿಕ ವಿರೋಧಿ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಗಂಗಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಕುಮಾರ್ ಉಂಕಿ, ಕ್ಷೇತ್ರ ಶಿಕ್ಷಣಾಧಿಕಾರಿ ಉಮಾಪತಿ, ಕಾರ್ಮಿಕ ನಿರೀಕ್ಷಕರಾದ ಜಿ.ಬಿ.ದೂಪದ್, ಶಿವಶಂಕರ್ ಬಿ ತಳವಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ ಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಯುವಕರು ಉದ್ಯೋಗ ಅರಸುವವರಲ್ಲ, ಉದ್ಯೋಗ ಸೃಷ್ಟಿಸುವವರಾಗಲಿ: ಶಿಕರ್ ಮುಫಾ



ಕಲಬುರಗಿ,ಜೂ.14-

ವಿಶ್ವವಿದ್ಯಾಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಿಂದ ಹೊರಬರುವ ಯುವ ಪ್ರತಿಭೆಗಳು ತಮ್ಮಲ್ಲಿರುವ ಉದ್ಯಮಶೀಲತಾ ಕೌಶಲ್ಯಗಳನ್ನು ಗುರುತಿಸಿ ಬೆಳೆಸಿಕೊಂಡರೆ ವೈಯಕ್ತಿಕ ಯಶಸ್ಸಿನ ಜೊತೆಗೆ ದೇಶದ ಅಭಿವೃದ್ಧಿಗೂ ಮಹತ್ವದ ಕೊಡುಗೆ ನೀಡಬಹುದು ಎಂದು ಪ್ರೊಬೇಷನರಿ ಐಎಎಸ್ ಅಧಿಕಾರಿ ಶಿಕರ್ ಮುಫಾ ಹೇಳಿದರು.

ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪ ಸಭಾ ಮಂಟಪದಲ್ಲಿ ಇಸಿಇ ವಿಭಾಗದ ತರಬೇತಿ ಮತ್ತು ಉದ್ಯೋಗ ನೇಮಕಾತಿ ಘಟಕವು ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸಹಯೋಗದಲ್ಲಿ ಆಯೋಜಿಸಿದ್ದ ಪ್ಲೇಸ್‌ಮೆಂಟ್ ಡ್ರೈವ್ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯುವಕರು ಕೇವಲ ಉದ್ಯೋಗಕ್ಕಾಗಿ ಹುಡುಕುವವರಾಗದೆ, ಉದ್ಯೋಗ ಸೃಷ್ಟಿಸುವ ಉದ್ಯಮಿಗಳಾಗಿಯೂ ರೂಪುಗೊಳ್ಳಬೇಕು. ಸಮಾಜದ ಉತ್ಪಾದಕ ಪಾಲುದಾರರಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅಭಿವೃದ್ಧಿ ಗುರಿಗಳ ಸಾಧನೆಯಲ್ಲಿ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

ತಮ್ಮ ವೈಯಕ್ತಿಕ ಅನುಭವ ಹಂಚಿಕೊಂಡ ಅವರು, ಇಂಜಿನಿಯರಿಂಗ್ ಶಿಕ್ಷಣ ಪೂರ್ಣಗೊಳಿಸಿದ ಬಳಿಕ ಇಂಟರ್ನ್‌ಶಿಪ್ ಅವಧಿಯಲ್ಲಿ ಪಡೆದ ಅನುಭವವೇ ನಾಗರಿಕ ಸೇವೆಗಳತ್ತ ತಮ್ಮನ್ನು ಸೆಳೆದಿತು ಎಂದು ಹೇಳಿದರು. ತಮ್ಮ ಹಲವಾರು ಸ್ನೇಹಿತರು ಯಶಸ್ವಿ ಉದ್ಯಮಿಗಳಾಗಿ ಬೆಳೆದು ಸಾವಿರಾರು ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಿರುವುದನ್ನು ಉಲ್ಲೇಖಿಸಿದ ಅವರು, ವಿದ್ಯಾರ್ಥಿಗಳು ತಮ್ಮೊಳಗಿನ ಉದ್ಯಮಶೀಲ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ವಿದ್ಯಾವಂತ ಯುವಕರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಈ ಪ್ರದೇಶದಲ್ಲಿ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ನಿಟ್ಟಿನಲ್ಲಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದು ತಿಳಿಸಿದರು.


ಕಾರ್ಯಕ್ರಮದಲ್ಲಿ ಹೀರೋ ಮೋಟಾರ್ಸ್ ಸಂಸ್ಥೆಯ ಪ್ರಧಾನ ವಿತರಕ ಕೃಷ್ಣಾಜಿ ಕುಲಕರ್ಣಿ ಹಾಗೂ ರೆನಾಲ್ಟ್ ಮತ್ತು ಐಷರ್ ಹೆವಿ ವೆಹಿಕಲ್ಸ್ ಸಂಸ್ಥೆಗಳ ಪ್ರಧಾನ ವಿತರಕ ದೊಡ್ಡಪ್ಪ ನಿಷ್ಠಿ ತಮ್ಮ ಉದ್ಯಮಶೀಲ ಪಯಣದ ಅನುಭವಗಳನ್ನು ಹಂಚಿಕೊಂಡರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ, ಪ್ಲೇಸ್‌ಮೆಂಟ್ ಡ್ರೈವ್ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳ ಹೊಸ ದಾರಿಗಳನ್ನು ತೆರೆಯಲಿದ್ದು, ಯಶಸ್ವಿ ಉದ್ಯಮಿಗಳಾಗಲು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳುವುದು ಅಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣಬಸವ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಅನಿಲಕುಮಾರ ಬಿಡವೆ ವಹಿಸಿದ್ದರು. ಕುಲಸಚಿವೆ ಡಾ.ಲಕ್ಷ್ಮಿ ಪಾಟೀಲ್ ಮಾಕಾ, ಡೀನ್ ಡಾ. ಶಿವಕುಮಾರ ಜವಳಿಗಿ, ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್‌ನ ಕಲಬುರಗಿ ಕ್ಲಸ್ಟರ್ ಮುಖ್ಯಸ್ಥ ಸುಜಯ್ ಮುದ್ಗಲ್, ವಿಶ್ವವಿದ್ಯಾಲಯದ ನಿರ್ದೇಶಕ ಪ್ರೊ.ವಿ.ಡಿ.ಮೈತ್ರಿ, ಸುಭಾ ಮಹತಾ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಪ್ಲೇಸ್‌ಮೆಂಟ್ ಡ್ರೈವ್‌ನಲ್ಲಿ ಸಾಫ್ಟ್‌ವೇರ್, ಹಾರ್ಡ್‌ವೇರ್, ಆಟೋಮೊಬೈಲ್ ಸೇರಿದಂತೆ ವಿವಿಧ ಕ್ಷೇತ್ರಗಳ ಪ್ರಮುಖ ಕಂಪನಿಗಳು ಮತ್ತು ಅವುಗಳ ಪ್ರತಿನಿಧಿಗಳು ಭಾಗವಹಿಸಿ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳ ಕುರಿತು ಮಾಹಿತಿ ನೀಡಿದರು.

ಬಳ್ಳಾರಿ: ಆಲದಹಳ್ಳಿ ಗ್ರಾಮದ 3.28 ಎಕರೆ ಸರ್ಕಾರಿ ಜಮೀನು ವಶಕ್ಕೆ



ಬಳ್ಳಾರಿ,ಜೂ.14-

ಬಳ್ಳಾರಿ ತಾಲ್ಲೂಕು ವ್ಯಾಪ್ತಿಯ ಆಲದಹಳ್ಳಿ ಗ್ರಾಮದಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಕೋಟ್ಯಂತರ ರೂಪಾಯಿ ಮೌಲ್ಯದ ಸರ್ಕಾರಿ ಜಮೀನನ್ನು ಕಂದಾಯ ಇಲಾಖೆ ಅಧಿಕಾರಿಗಳು ಶನಿವಾರ ಯಶಸ್ವಿಯಾಗಿ ವಶಪಡಿಸಿಕೊಂಡಿದ್ದಾರೆ.

ಆಲದಹಳ್ಳಿ ಗ್ರಾಮದ ಸರ್ವೆ ನಂಬರ್ 38/ಎ ರಲ್ಲಿ ಬರುವ ಒಟ್ಟು 3.28 ಎಕರೆ ವಿಸ್ತೀರ್ಣದ ಜಮೀನು ಸರ್ಕಾರಿ ಈಚಲವನ ಜಮೀನಾಗಿದೆ. ಈ ಜಾಗವನ್ನು ಕೆಲವರು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಆದೇಶದನ್ವಯ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಮತ್ತು ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ ಅವರ ನೇತೃತ್ವದ ತಂಡವು ಸ್ಥಳಕ್ಕೆ ಧಾವಿಸಿ ಜಮೀನನ್ನು ಸರ್ಕಾರದ ಸುಪರ್ದಿಗೆ ಪಡೆದಿದೆ.

ಸರ್ಕಾರಿ ಜಾಗದಲ್ಲಿ ಅಕ್ರಮವಾಗಿ ನಿರ್ಮಿಸಿದ್ದ ಕಾಂಪೌಂಡ್ ಗೋಡೆಗಳು, ಬೇಲಿ ಹಾಗೂ ಇತರೆ ತಾತ್ಕಾಲಿಕ ರಚನೆಗಳನ್ನು ಜೆಸಿಬಿ ಯಂತ್ರಗಳ ಸಹಾಯದಿಂದ ಸಂಪೂರ್ಣವಾಗಿ ಧ್ವಂಸಗೊಳಿಸಲಾಗಿದೆ.

ಅಲ್ಲದೆ, ಸಾರ್ವಜನಿಕರ ಮಾಹಿತಿಗಾಗಿ ಅಲ್ಲಿ ಜಾಗೃತಿ ಫಲಕವನ್ನು ಅಳವಡಿಸಲಾಗಿದೆ.

ಸ್ಥಳದಲ್ಲಿದ್ದ ಅಧಿಕಾರಿಗಳು ಒತ್ತುವರಿ ತೆರವು ಪ್ರಕ್ರಿಯೆಯನ್ನು ಹತ್ತಿರದಿಂದ ಪರಿಶೀಲಿಸಿ, ಇಡೀ ಜಾಗವನ್ನು ಮತ್ತೆ ಸರ್ಕಾರದ ಸುಪರ್ದಿಗೆ ಪಡೆದುಕೊಂಡಿದ್ದಾರೆ. ಸ್ಥಳದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ಸಾರ್ವಜನಿಕ ಆಸ್ತಿ ಮತ್ತು ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಈ ಸಂದರ್ಭದಲ್ಲಿ ಎಚ್ಚರಿಕೆ ನೀಡಿದ್ದಾರೆ.

ಆತ್ಮನಿರ್ಭರ ಅಭಿಯಾನ ಯೋಜನೆಗೆ ಶಾಸಕ ಅಲ್ಲಮಪ್ರಭು ಪಾಟೀಲ್ ಚಾಲನೆ



ಕಲಬುರಗಿ,ಜೂ.14-

ತಾಲೂಕಿನ ರೈತರಿಗೆ ಕೃಷಿ ಇಲಾಖೆಯಿಂದ ಸಿಹಿಸುದ್ದಿ ದೊರೆತಿದ್ದು, 2026-27ನೇ ಸಾಲಿನ ದ್ವಿದಳ ಧಾನ್ಯಗಳ ಆತ್ಮನಿರ್ಭರ ಅಭಿಯಾನ ಯೋಜನೆಯಡಿ ಉಚಿತ ತೊಗರಿ ಮಿನಿಕೀಟ್ ಬೀಜಗಳ ವಿತರಣಾ ಕಾರ್ಯಕ್ರಮವನ್ನು ತಾಲೂಕಿನ ಪಟ್ನ ಗ್ರಾಮದಲ್ಲಿರುವ ರೈತ ಸಂಪರ್ಕ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಯಿತು.

ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ರೈತರಿಗೆ ಉಚಿತ ತೊಗರಿ ಮಿನಿಕೀಟ್ ಬೀಜಗಳನ್ನು ವಿತರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕೃಷಿ ಕ್ಷೇತ್ರದ ಅಭಿವೃದ್ಧಿಗಾಗಿ ಸರ್ಕಾರ ಹಲವು ಜನಪರ ಯೋಜನೆಗಳನ್ನು ಜಾರಿಗೆ ತರುತ್ತಿದ್ದು, ರೈತರು ಅವುಗಳ ಸದುಪಯೋಗ ಪಡೆದುಕೊಂಡು ಉತ್ಪಾದನೆ ಹೆಚ್ಚಿಸಿ ಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮದಲ್ಲಿ ರೈತರಿಗೆ ಗುಣಮಟ್ಟದ ತೊಗರಿ ಬೀಜಗಳನ್ನು ವಿತರಿಸಲಾಯಿತು.

ದ್ವಿದಳ ಧಾನ್ಯಗಳ ಉತ್ಪಾದನೆ ಹೆಚ್ಚಿಸುವುದು ಹಾಗೂ ರಾಜ್ಯವನ್ನು ಈ ಕ್ಷೇತ್ರದಲ್ಲಿ ಸ್ವಾವಲಂಬಿಯನ್ನಾಗಿಸುವ ಉದ್ದೇಶದಿಂದ ಆತ್ಮನಿರ್ಭರ ಅಭಿಯಾನ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ರೈತರು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು. ಉತ್ತಮ ಇಳುವರಿ ಪಡೆಯಲು ಕೃಷಿ ಇಲಾಖೆಯ ತಜ್ಞರ ಸಲಹೆ ಹಾಗೂ ಮಾರ್ಗದರ್ಶನವನ್ನು ಅನುಸರಿಸುವಂತೆ ಕಾರ್ಯಕ್ರಮ ದಲ್ಲಿ ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್, ಮುಖಂಡರಾದ ದಶರಥ ಬಾಬು ಒಂಟಿ, ಸಂತೋಷ್ ಪಾಟೀಲ್ ಡನ್ನೂರ್, ಲಿಂಗರಾಜ್ ಕಣ್ಣಿ, ಬಸವರಾಜ್ ಶರಣಪ್ಪ ಜೀವಣಗಿ ಸೇರಿದಂತೆ ರೈತರು ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಯೋಗವನ್ನು ಕಲಿಯಿರಿ ಆರೋಗ್ಯವಂತರಾಗಿರಿ ಬಿಕೆ ಸ್ಮಿತಾ ಅಕ್ಕ

ಜಡತ್ವ ಯೋಗದಿಂದಲೇ ಪತತ್ವ ಎಂಬುದನ್ನ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು .ಇಡೀ ಜಗತ್ತಿನಲ್ಲಿ ಯೋಗ ಭಾರತದಲ್ಲಿ ಜನಪ್ರಿಯನ್ನು ಪಡೆದಿದೆ .ವಿಶ್ವದ ನೂರಾರು ರಾಷ್ಟ್ರಗಳಲ್ಲಿ ಯೋಗಭ್ಯಾಸ ಮಾಡುತ್ತಿರುವುದು ಅದು ಭಾರತೀಯರ ಹೆಮ್ಮೆ ಪಡುವ ವಿಷಯವಾಗಿದೆ ಎಂದು ಹೇಳಿದರು .ಈ ಕಾರ್ಯಕ್ರಮದಲ್ಲಿ ಜಿಲ್ಲಾ ಅಯುಷ ಇಲಾಖೆಯ ಡಾಕ್ಟರ್ ಪೂಜಾ ಯೋಗಾಭ್ಯಾಸದ ಮಹತ್ವ ಯೋಗ ದಿನಾಚರಣೆ ಹಿನ್ನೆಲೆ ಹಾಕಿಕೊಂಡ ಕಾರ್ಯಕ್ರಮಗಳು ಕುರಿತು ಮಾತನಾಡಿದರು. ತಿಮ್ಮಪ್ಪ ವಡ್ಡೆಪಲ್ಲಿ ಯೋಗ ಶಿಕ್ಷಕರು ಯೋಗದ ವಿವಿಧ ಆಸನಗಳ ಕುರಿತು ಪ್ರಾತ್ಯಕ್ಷಿತ ನೀಡಿದರು. ಈ ಸಂದರ್ಭದಲ್ಲಿ ಶಾರದಕ್ಕ ಡಾ ನವೀನ್ ಕುಮಾರ್ ಪಿ ಸುರೇಖಾ ಹಾಗೂ ಜಿಲ್ಲಾ ಆಯುಷ ಇಲಾಖೆಯ ಸಿಬ್ಬಂದಿಯವರು ಪ್ರಜಾಪಿತ ಬ್ರಹ್ಮಕುಮಾರಿ ಸಂಸ್ಥೆಯ ಹಲವಾರು ಸ್ವಯಂಸೇವಕರು ಇದರಲ್ಲಿ ಪಾಲ್ಗೊಂಡಿದ್ದರು.

ಹೂಗಾರರು ದೇವರಷ್ಟೇ ಪರಮೋಚ್ಚ ಸ್ಥಾನ ಪಡೆದವರು-ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರು

ಅಫಜಲಪುರ: ಪಟ್ಟಣದ ಬಸವ ಮಂಟಪದಲ್ಲಿ ತಾಲೂಕು ಹೂಗಾರ ಸಮಾಜ ಸೇವಾ ಸಂಘದ ನೂತನ ಪದಾಧಿಕಾರಿಗಳು ಹಾಗೂ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಗೌರವ ಸನ್ಮಾನ ಕಾರ್ಯಕ್ರಮ ನಡೆಯಿತು.



ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಶಾಸಕ ಎಮ್.ವೈ.ಪಾಟೀಲ ಹೂಗಾರ ಸಮಾಜ ತಾಲೂಕಿನಲ್ಲಷ್ಟೆ ಅಲ್ಲದೇ ರಾಜ್ಯದಲ್ಲಿ ಸರ್ವ ಸಮಾಜದವರೊಂದಿಗೆ ಅನ್ಯೋನ್ಯತೆಯಿಂದ ಕೂಡಿದೆ.ತಾಲೂಕಿನಲ್ಲಿ ಕಡಿಮೆ ಜನಸಂಖ್ಯೆಯಲ್ಲಿರುವ ಹೂಗಾರ ಸಮಾಜ ಯಾವತ್ತು ಯಾರೊಂದಿಗೂ ದ್ವೇಷ ಕಟ್ಟಿಕೊಂಡವರಲ್ಲ.ಅವರ ಕಾಯಕದ ಜೊತೆಗೆ ಎಲ್ಲರೊಂದಿಗೆ ಅನೊನ್ಯವಾದ ಸಂಬಂಧ ಹೊಂದಿದವರಾಗಿದ್ದಾರೆ.ಅಣ್ಣ ಬಸವಣ್ಣನವರ ಕಾಲದಿಂದಲೂ ಹೂಗಾರ ಮಾದಯ್ಯನವರ ಸಂತತಿ ಅವರ ಹಾದಿಯಲ್ಲಿಯೇ ಅವರ ಕುಲಕಸುಬಿನೊಂದಿಗೆ ಮುಂದುವರೆಯುತ್ತಾ ಬಂದಿದೆ.ಸಮಾಜದ ಬಹುದಿನಗಳ ಬೇಡಿಕೆಗಳಲ್ಲೊಂದಾದ ಸಮಾಜದ ಸಭೆ ಸಮಾರಂಭಗಳಿಗೆ ಹೂಗಾರ ಭವನ ನಿರ್ಮಾಣವನ್ನು ಕೂಡಲೇ ಸಿಎ ಸೈಟ್ ಮಂಜೂರು ಮಾಡಿಸಿ ಅನುದಾನವನ್ನು ಕೊಡಿಸುವ ಪ್ರಯತ್ನ ಮಾಡುತ್ತೇನೆ ಎಂದರು.

ತದನಂತರ ಮಾತನಾಡಿದ ಕೆಪಿಸಿಸಿ ರಾಜ್ಯ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಜೆ.ಎಮ್.ಕೊರಬು ಹೂಗಾರ ಸಮಾಜ ಸೌಮ್ಯ ಸಮಾಜವಾಗಿದ್ದು,ಈ ಸಮಾಜ ಶೈಕ್ಷಣಿಕವಾಗಿ ಆರ್ಥಿಕವಾಗಿ ರಾಜಕೀಯವಾಗಿ ಮುಂದೆ ಬರಬೇಕು.ಇಂದು ಮಾಡುತ್ತಿರುವ ಪ್ರತಿಭಾ ಪುರಸ್ಕಾರ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ.ಮಾನ್ಯ ಶಾಸಕರು ಈ ಸಣ್ಣ ಸಮುದಾಯಗಳೊಂದಿಗೆ ಹಡಪದ,ಭೋವಿ,ಕುಂಬಾರ,ಕಂಬಾರ ಸಮಾಜಗಳಿಗೆ ಸರಕಾರದ ನೆರುವು ಕೊಡಲು ಮುಂದಾಗಬೇಕು.ದೊಡ್ಡ ಸಮಾಜಗಳಿಗೆ ಎಲ್ಲರೂ ಮಣೆ ಹಾಕುತ್ತಾರೆ. ತಾವು ಈ ಸಮಾಜಗಳಿಗೆ ಹೆಚ್ಚು ಪ್ರಾಶಸ್ತ್ಯ ನೀಡಬೇಕು ಎಂದರು.

ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರು ಬಸವಾದಿ ಶರಣರ ಕಾಲದಿಂದ ನಮ್ಮ ಹೂಗಾರ ಸಮಾಜ ಹೂವುಗಳನ್ನು ಪೋಣಿಸಿ ದೇವರಿಗೆ ಅರ್ಪಣೆ ಮಾಡುತ್ತ ಬಂದಿದೆಅಷ್ಟೆ ಪಾವಿತ್ರ್ಯತೆಯನ್ನು ಇಂದಿಗೂ ಕಾಯ್ದುಕೊಂಡು ಬಂದಿದೆ.ಹೂಗಾರ ಸಮಾಜದ ಬಂಧುಗಳು ಎಲ್ಲಾ ವರ್ಗದ ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದು, ಮಳೇಂದ್ರ ಶಿವಾಚಾರ್ಯರ ಆಶೀರ್ವಾದ ಈ ಸಮಾಜದ ಮೇಲೆ ಯಾವತ್ತು ಇರುತ್ತದೆ ಎಂದರು.

ಇದೆ ಸಂದರ್ಭದಲ್ಲಿ ಕಾರ್ಯಕ್ರಮದ ಸಾನಿಧ್ಯವನ್ನು,ಶರಣಬಸವ ಶರಣರು ವಹಿಸಿದ್ದರು. ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರ, ಕೆಪಿಸಿಸಿ ರಾಜ್ಯ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಜೆ.ಎಮ್.ಕೊರಬು,ರಾಜ್ಯಾಧ್ಯಕ್ಷ ಶಂಕರ ಹೂಗಾರ, ಅಶೋಕ ಹೂಗಾರ, ಚಂದ್ರಕಾಂತ ಹೂಗಾರ,ಬಸವರಾಜ ಹೂಗಾರ,ರಮೇಶ ಹೂಗಾರ,ಶಂಕರ ಮ್ಯಾಕೇರಿ, ಚಂದ್ರಶೇಖರ ಕರಜಗಿ, ಪ್ರಭಾವತಿ ಮೇತ್ರೆ, ಡಾ.ಲಕ್ಷ್ಮಿಕಾಂತ ಹೂಗಾರ, ಶ್ರೀಶೈಲ ಬಳೂರ್ಗಿ,ಶಿವಾನಂದ ಹೂಗಾರ ಮಲ್ಲಿಕಾರ್ಜುನ, ಕಲ್ಲಪ್ಪ, ನಿಲಮ್ಮ ಹೂಗಾರ, ಸಂತೋಷ ಹೂಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವೆಲ್ಫೇರ್ ಪಾರ್ಟಿ ಮೂರು ಜಿಲ್ಲೆಗಳ ಸಮಾವೇಶ ಶೋಷಿತ ಸಮುದಾಯಕ್ಕೆ ರಾಜಕೀಯ ಪ್ರತಿನಿಧಿತ್ವ ದೊರಕಬೇಕು : ತಾಹೇರ್ ಹುಸೇನ್

ಕೊಪ್ಪಳ,ಜೂ.14-

ಸಾಮಾಜಿಕ ನ್ಯಾಯ, ಪ್ರಜಾಸತ್ತಾತ್ಮಕ ಮೌಲ್ಯಗಳ ರಕ್ಷಣೆ ಹಾಗೂ ಹಿಂದುಳಿದ ಮತ್ತು ಶೋಷಿತ ವರ್ಗದ ಸಮುದಾಯಗಳಿಗೆ ಸಮರ್ಪಕ ರಾಜಕೀಯ ಪ್ರತಿನಿಧಿತ್ವ ದೊರಕಬೇಕಾದ ಅಗತ್ಯ ಇದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಪಕ್ಷದ ರಾಜ್ಯಾಧ್ಯಕ್ಷ ನ್ಯಾಯವಾದಿ ತಾಹೇರ್ ಹುಸೇನ್ ಅವರು ಹೇಳಿದರು.



ಅವರು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ವತಿಯಿಂದ ''ಸಾಮಾ ಜಿಕ ನ್ಯಾಯಕ್ಕಾಗಿ ರಾಜಕೀಯ ಸಬಲೀಕರಣ'' ಎಂಬ ಘೋಷವಾಕ್ಯದಡಿ ಚರುಗಿದ ಜಿಲ್ಲಾ ಸಮಾವೇಶ ವನ್ನು ಶುಕ್ರವಾರ ಸಂಜೆ ವೇಳೆಯಲ್ಲಿ ನಗರದ ಮುಸ್ಲಿಂ ಶಾದಿಮಹಲ್‌ನಲ್ಲಿ ನಡೆದ ಸಮಾವೇಶದಲ್ಲಿ ಪಾಲ್ಗೊಂಡು ಸಮಾವೇಶದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಿದ್ದರು.

ಅವರು ಮುಂದುವರಿದು ಮಾತ ನಾಡುತ್ತಾ ಸಂವಿಧಾನವು ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ವಾದ ಹಕ್ಕು ಕಲ್ಪಿಸಿಕೊಟ್ಟಿದೆ, ಆದರೆ ಇಲ್ಲಿನ ರಾಜಕೀಯ ವ್ಯವಸ್ಥೆ ಮತ್ತು ಕೆಲವು ರಾಜಕೀಯ ಪಕ್ಷಗಳು ಅಲ್ಪಸಂಖ್ಯಾತರ ಹಕ್ಕಗಳನ್ನು ಕಿತ್ತುಕೊ ಳ್ಳಲು ಹುನ್ನಾರ ನಡೆಸಿವೆ ಎಂದು ಹಾಗೂ ಸಮಾಜದ ಎಲ್ಲ ವರ್ಗಗಳ ಸಬಲೀಕರಣಕ್ಕಾಗಿ ರಾಜಕೀಯ ಜಾಗೃತಿ ಮತ್ತು ಸಂಘಟಿತ ಹೋರಾ ಟ ಅಗತ್ಯವೆಂದು ಅವರು ಅಭಿಪ್ರಾಯಪಟ್ಟರು.

ದೇಶದ ಒಂದು ದೊಡ್ಡ ಸಮುದಾಯವನ್ನು ತಮ್ಮ ಮೂಲಭೂತ ಹಕ್ಕುಗಳಿಂದ ವಂಚಿತರನ್ನಾಗಿ ಮಾಡಿದರೆ ದೇಶ ಅದು ಹೇಗೆ ಅಭಿವೃದ್ಧಿ ಹೊದಲು ಸಾಧ್ಯ ಎಂದು ವೆಲ್ಫೇರ್ ಪಾರ್ಟಿಯ ರಾಜ್ಯ ಅಧ್ಯಕ್ಷ ರಾದ ನ್ಯಾಯವಾದಿ ತಾಹೇರ್ ಹುಸೇನ್ ಪ್ರಶ್ನಿಸಿದರು.

ಕಾರ್ಯಕ್ರಮದಲ್ಲಿ ವೆಲ್ಫೇರ್ ಪಾರ್ಟಿಯ ರಾಜ್ಯ ಉಪಾಧ್ಯಕ್ಷ ಹಬಿಬುಲ್ಲಾ ಖಾನ್ ರವರು ಮಾತನಾಡಿ ಸಾಮಾಜಿಕ ನ್ಯಾಯಕ್ಕಾಗಿ ಸ್ಥಾಪಿತಗೊಂಡಿರುವ ನಮ್ಮ ಪಕ್ಷಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಮಹಿಳೆಯರು ಸೇರಬೇಕು ಪಕ್ಷ ಸಂಘಟನೆಗೆ ಒತ್ತು ನೀಡಬೇಕು ಇದರಿಂದ ಜನಸಾಮಾನ್ಯರಿಗೆ ಅವರ ಸಮಸ್ಯೆಗಳಿಗೆ ನೇರ ಸ್ಪಂದನೆ ನೀಡಿ ಶ್ರಮಿಸಲು ನಮ್ಮ ಪಕ್ಷ ಸಿದ್ಧವಿದೆ ಎಂದರು,ರಾಜ್ಯ ಮಹಿಳಾ ಅಧ್ಯಕ್ಷೆ ಸಬಿಹಾ ಪಟೇಲ್ ರವರು ಮಾತ ನಾಡಿ ಪಕ್ಷದ ಮಹಿಳಾ ಸಂಘಟನೆ ಬಲವರ್ಧನೆಗೊಳಿಸಿ ಸಾಮಾನ್ಯ ಜನರ ಸೇವೆ ಮಾಡಲು ಮಹಿಳೆ ಯರು ಕೂಡ ಮುಂದಾಗಬೇಕು ಎಂದರು,ರಾಜ್ಯ ಮಹಿಳಾ ಕಾರ್ಯ ದರ್ಶಿ ತಲತ್ ಯಾಸ್ಮಿನ್, ವಲಯ ಕಾರ್ಯದರ್ಶಿ ಇರ್ಫಾನ್, ರಾಜ್ಯ ಕಾರ್ಮಿಕರ ಸಂಘ ಸಂಚಾಲಕ ರಾಜಾ ನಾಯಕ.ಧಾರವಾಡ ಜಿಲ್ಲಾ ಅಧ್ಯಕ್ಷ ಅಬ್ದುಲ್ ಮಲಿಕ್, ಗದಗ್ ಜಿಲ್ಲಾ ಅಧ್ಯಕ್ಷ ಜುನೆದ್ ಉಮಚ್ಗಿ, ವೇದಿಕೆ ಮೇಲೆ ಉಪಸ್ಥಿತರಿದ್ದು ಕೊಪ್ಪಳ ಜಿಲ್ಲಾ ಅಧ್ಯಕ್ಷ ಆದಿಲ್ ಪಟೇಲ್ ರವರು ಪ್ರಾಥಮಿಕವಾಗಿ ಮಾತನಾಡಿ ಪಕ್ಷದ ಜನಪರ ಕಾರ್ಯಕ್ರಮ ಮತ್ತು ಯೋಜನೆಗಳ ಬಗ್ಗೆ ಸಮಾವೇಶದಲ್ಲಿ ಮಾಹಿತಿ ನೀಡಿದರು, ಕೊಪ್ಪಳ ಜಿಲ್ಲಾ ಕಾರ್ಯ ದರ್ಶಿ ಮುಹಮ್ಮದ್ ಅನ್ಸರ್ ಮಹಿಳಾ ಘಟಕ ಜಿಲ್ಲಾ ಕಾರ್ಯ ದರ್ಶಿ ಸಲಿಮಾ ಜಹಾನ್, ಕೊಪ್ಪಳ ಜಿಲ್ಲೆ ಉಪಾಧ್ಯಕ್ಷ ಮಹಬೂಬ್ ಸಾಬ್ ಕುಷ್ಟಗಿ ಹಾಗೂ ಕಾರ್ಯಕ ರ್ತರು ಮತ್ತು ಅಭಿಮಾನಿಗಳು ಭಾಗವಹಿಸಿದ್ದರು. ಕೊಪ್ಪಳ ಗದಗ್ ಮತ್ತು ಧಾರವಾಡ ಜಿಲ್ಲೆಗಳಿಂದ ವೆಲ್ಫೇರ್ ಪಾರ್ಟಿಯ ಪದಾಧಿಕಾರಿಗಳು ಕಾರ್ಯಕರ್ತರು ಮತ್ತು ಅಭಿಮಾನಿಗಳು ಸಮಾವೇಶದಲ್ಲಿ ಪಾಲ್ಗೊಂಡಿದ್ದರು ಇದಕ್ಕೂ ಮುನ್ನ ರಾಜ್ಯ ಮುಖಂಡರ ಬೈಕ್ ರ್ಯಾಲಿ ಕೊಪ್ಪಳ ನಗರದ ಪ್ರಮುಖ ರಸ್ತೆಯಲ್ಲಿ ಸಂಚರಿಸಿ ಶಾದಿ ಮಹಲ್ ಆವರಣಕ್ಕೆ ತಲುಪಿತು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಮತ್ತು ಅಭಿಮಾನಿಗಳು ಪಾಲ್ಗೊಂಡಿದ್ದರು,

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ನಕಲಿ ಮತಗಳನ್ನು ಉಳಿಸಿಕೊಳ್ಳಲು ಕಾಂಗ್ರೆಸ್ ಕಸರತ್ತು : ಮಾಜಿ ಶಾಸಕ ಟಿ.ಎಚ್.ಸುರೇಶಬಾಬು ಆರೋಪ



ಬಳ್ಳಾರಿ/ಕಂಪ್ಲಿ,ಜೂ.14-

ಚುನಾವಣಾ ಆಯೋಗದ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದ್ದು, ನಕಲಿ ಮತಗಳನ್ನು ಉಳಿಸಿಕೊಳ್ಳುವ ಉದ್ದೇಶದಿಂದ ಕಾಂಗ್ರೆಸ್ ವಿರೋಧ ವ್ಯಕ್ತಪಡಿಸುತ್ತಿದೆ ಎಂದು ಮಾಜಿ ಶಾಸಕ ಟಿ.ಎಚ್. ಸುರೇಶಬಾಬು ಆರೋಪಿಸಿದರು.

ಪಟ್ಟಣದ ಕೊಟ್ಟಾಲ್ ರಸ್ತೆಯಲ್ಲಿರುವ ತುಂಗಭದ್ರ ಕಾರ್ಯಾಲಯದಲ್ಲಿ ಬಿಜೆಪಿ ಜಿಲ್ಲಾ ಘಟಕ ಹಾಗೂ ಕಂಪ್ಲಿ ಮಂಡಲದ ವತಿಯಿಂದ ಆಯೋಜಿಸಿದ್ದ ಬಿಎಲ್‌ಎ-2 ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿಯನ್ನು ಪಾರದರ್ಶಕಗೊಳಿಸುವ ಉದ್ದೇಶದಿಂದ ಚುನಾವಣಾ ಆಯೋಗ ಎಸ್‌ಐಆರ್ ಜಾರಿಗೊಳಿಸಿದ್ದು, ಕಂಪ್ಲಿ ಕ್ಷೇತ್ರದ ಪ್ರತಿಯೊಂದು ಬೂತ್ ಮಟ್ಟದಲ್ಲೂ ಬಿಜೆಪಿ ಕಾರ್ಯಕರ್ತರು ಮತದಾರರ ಪಟ್ಟಿಯನ್ನು ಪರಿಶೀಲಿಸುವ ಕಾರ್ಯ ಕೈಗೊಳ್ಳಬೇಕು ಎಂದು ಕರೆ ನೀಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸುಳ್ಳು ಭರವಸೆಗಳ ಆಧಾರದಲ್ಲಿ ಅಧಿಕಾರಕ್ಕೆ ಬಂದಿದ್ದು, ಅಭಿವೃದ್ಧಿ ಕಾರ್ಯಗಳಲ್ಲಿ ವಿಫಲವಾಗಿದೆ. ಕಂಪ್ಲಿ ಸೇತುವೆ ಸೇರಿದಂತೆ ಹಲವು ಪ್ರಮುಖ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿಲ್ಲ. ಕಮಿಷನ್ ರಾಜಕಾರಣದಿಂದ ಅಭಿವೃದ್ಧಿ ಕುಂಠಿತಗೊಂಡಿದೆ ಎಂದು ಟೀಕಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಅನೀಲ್‌ಕುಮಾರ್ ಮೋಕಾ ಮಾತನಾಡಿ, 24 ವರ್ಷಗಳ ಬಳಿಕ ದೇಶಾದ್ಯಂತ ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿದೆ. ಇದು ಬಿಜೆಪಿ ಕಾರ್ಯಕ್ರಮವಲ್ಲ, ಚುನಾವಣಾ ಆಯೋಗದ ಪ್ರಕ್ರಿಯೆಯಾಗಿದೆ. ರಾಜ್ಯದಲ್ಲಿ ಸುಮಾರು 86 ಲಕ್ಷ ಹಾಗೂ ಜಿಲ್ಲೆಯಲ್ಲಿ 92 ಸಾವಿರಕ್ಕೂ ಹೆಚ್ಚು ನಕಲಿ ಮತಗಳಿರುವ ಶಂಕೆ ಇದ್ದು, ಅವುಗಳನ್ನು ಪತ್ತೆಹಚ್ಚುವ ಕಾರ್ಯಕ್ಕೆ ಬಿಜೆಪಿ ಕಾರ್ಯಕರ್ತರು ಮುಂದಾಗಬೇಕು ಎಂದು ಹೇಳಿದರು.

ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ. ಮಹಾದೇವ ಅಧ್ಯಕ್ಷತೆ ವಹಿಸಿ ಮಾತನಾಡಿ, ಮತದಾರರ ಪಟ್ಟಿಯ ಪಾರದರ್ಶಕತೆಗೆ ಬಿಜೆಪಿ ಸದಾ ಬೆಂಬಲ ನೀಡಲಿದೆ ಎಂದರು.

ಕ್ಷೇತ್ರದ ಬಿಎಲ್‌ಎ1 ಸಂಚಾಲಕ ಜಿ. ಶ್ರೀನಿವಾಸ ಪ್ರಾಸ್ತಾವಿಕವಾಗಿ ಮಾತನಾಡಿ, ಎಸ್‌ಐಆರ್ ಮೂಲಕ ಅರ್ಹ ಮತದಾರರ ಹಕ್ಕು ರಕ್ಷಣೆ ಹಾಗೂ ನಕಲಿ ಮತಗಳಿಗೆ ಕಡಿವಾಣ ಹಾಕುವ ಉದ್ದೇಶವಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನೂತನವಾಗಿ ನೇಮಕಗೊಂಡ ವಿವಿಧ ಮೋರ್ಚಾಗಳ ಪದಾಧಿಕಾರಿಗಳಿಗೆ ಆದೇಶ ಪ್ರತಿಗಳನ್ನು ವಿತರಿಸಲಾಯಿತು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುನೀಲ್‌ರೆಡ್ಡಿ, ಎಸ್‌ಐಆರ್ ಸಂಚಾಲಕ ಗಾಳಿ ಶಂಕ್ರಪ್ಪ, ರಾಜ್ಯ ಕಾರ್ಯಕಾರಿಣಿ ಸದಸ್ಯ ರಂಗಳ್ಳಿ ತಿಮ್ಮಾರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಅಳ್ಳಳ್ಳಿ ವಿರೇಶ್, ಕುರುಗೋಡು ಮಂಡಲ ಅಧ್ಯಕ್ಷ ಮದಿರೆ ಕುಮಾರಸ್ವಾಮಿ, ರಬಿಯಾ ನಿಸಾರ್ ಎನ್. ಮನೋಜಗೌಡ, ಮುರಳಿ ಮೋಹನ್‌ರೆಡ್ಡಿ, ಕಟ್ಟೆ ವಿಶ್ವನಾಥ, ಬಸವಪ್ರಭು ಸೇರಿದಂತೆ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಬಳ್ಳಾರಿಯಲ್ಲಿ ಹಿರಿಯ ಶಸ್ತ್ರಚಿಕಿತ್ಸಕರಿಗೆ ಸನ್ಮಾನ ಹಾಗೂ ವೈಜ್ಞಾನಿಕ ಉಪನ್ಯಾಸದೊಂದಿಗೆ ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ದಿನಾಚರಣೆ



ಬಳ್ಳಾರಿ,ಜೂ.14-

ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆಯ ಅಂಗವಾಗಿ, ಶುಕ್ರವಾರ ನಗರದ ಖಾಸಗಿ ಹೋಟೆಲ್‌ನಲ್ಲಿ ಕೆಎಸ್ಸಿ -ಎಎಸ್‌ಐ ಬಳ್ಳಾರಿ ನಗರ ಶಾಖೆಯ ಆಶ್ರಯದಲ್ಲಿ ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ದಿನಾಚರಣೆ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಕಾಸಾ ಸೋಮಶೇಖರ್ ಅವರು, ''ಆಪರೇಷನ್ ಥಿಯೇಟರ್‌ನಲ್ಲಿ ಸ್ಟೆರಿಲಿಟಿಗೆ ಧಕ್ಕೆಯುಂಟುಮಾಡುವ ಸೂಕ್ಷ್ಮ ತಪ್ಪುಗಳು ಎಂಬ ವಿಷಯದ ಕುರಿತು ಅತ್ಯಂತ ಮಾಹಿತಿಪೂರ್ಣವಾದ ವೈಜ್ಞಾನಿಕ ಉಪನ್ಯಾಸ ನೀಡಿದರು. ರೋಗಿಗಳ ಸುರಕ್ಷತೆ ಹಾಗೂ ಶಸ್ತ್ರಚಿಕಿತ್ಸೆ ಯ ಗುಣಮಟ್ಟವನ್ನು ಕಾಪಾಡಲು ಕಟ್ಟುನಿಟ್ಟಾದ ಅಸೆಪ್ಟಿಕ್ ಕ್ರಮಗಳನ್ನು (ಅಸೆಪ್ಟಿಕ್ ಪ್ರೊಟೊಕಾಲ್ಸ್) ಪಾಲಿಸುವುದು ಎಷ್ಟು ಮುಖ್ಯ ಎಂಬುದನ್ನು ಅವರು ತಮ್ಮ ಉಪನ್ಯಾಸದಲ್ಲಿ ತಿಳಿಸಿದರು.

ಕೆಎಸ್ಸಿ -ಎಎಸ್‌ಐ ಬಳ್ಳಾರಿ ನಗರ ಶಾಖೆಯ ಅಧ್ಯಕ್ಷ ಡಾ. ಶೇಕಪ್ಪ ಸಿ. ಮಾಳಗಿಮನಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಹಿರಿಯ ಶಸ್ತ್ರಚಿಕಿತ್ಸಕರಾದ ಡಾ. ಚನ್ನಣ್ಣ ಸಿ. ಹಾಗೂ ಡಾ. ಎಲ್. ವಿ. ರಾಮಣ್ಣ ಅವರನ್ನು ಸನ್ಮಾನಿಸಲಾಯಿತು. ಶಸ್ತ್ರಚಿಕಿತ್ಸಾ ಕ್ಷೇತ್ರಕ್ಕೆ ಅವರು ನೀಡಿದ ಅಮೂಲ್ಯ ಕೊಡುಗೆ ಹಾಗೂ ಸಮಾಜ ಮತ್ತು ವೈದ್ಯಕೀಯ ಕ್ಷೇತ್ರಕ್ಕೆ ಸಲ್ಲಿಸಿದ ವಿಶಿಷ್ಟ ಸೇವೆಯನ್ನು ಗುರುತಿಸಿ ಈ ಗೌರವವನ್ನು ಸಮರ್ಪಿಸಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದ ಸಾಮಾನ್ಯ ಶಸ್ತ್ರಚಿಕಿತ್ಸಾ ವಿಭಾಗದ ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರಾದ ಡಾ.ಕಾಸಾ ಸೋಮಶೇಖರ್

ಎಎಸ್‌ಐ ಕಾರ್ಯದರ್ಶಿ ಡಾ.ಗಡ್ಡಿ ದಿವಾಕರ್ ಹಾಗೂ ಕೆಎಸ್ಸಿ -ಎಎಸ್‌ಐ ಖಜಾಂಚಿ ಡಾ. ಯಾಳೆಗುರು ಬಸವನಗೌಡ, ಶಾಖೆಯ ಕಾರ್ಯದರ್ಶಿ ಡಾ. ಗುಡೇಕೋಟೆ ರವಿಕುಮಾರ, ಜಂಟಿ ಕಾರ್ಯದರ್ಶಿ ಡಾ. ಶೈಖ್ ಫರ್ಹಾನ್ ಎಂ.ಬಿ. ಹಾಗೂ ಖಜಾಂಚಿ ಡಾ. ಅತುಲ್ ಕುಲಕರ್ಣಿ ಸೇರಿದಂತೆ ಹಿರಿಯ ಶಸ್ತ್ರಚಿಕಿತ್ಸಕರು, ಕಾರ್ಯನಿರತ ಶಸ್ತ್ರಚಿಕಿತ್ಸಕರು, ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಪದವಿಪೂರ್ವ ವೈದ್ಯಕೀಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಕೃಷಿ ಪರಿಕರ ಮಳಿಗೆಗಳ ಮೇಲೆ ಅಧಿಕಾರಿಗಳಿಂದ ದಿಢೀರ್ ತಪಾಸಣೆ

ಚಿತ್ತಾಪುರ,

ತಾಲೂಕಿನ ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ತಹಶೀಲ್ದಾರ್ ನಾಗಯ್ಯ ಹೀರೆಮಠ ನೇತೃತ್ವದ ಅಧಿಕಾರಿಗಳ ತಂಡ ದಿಢೀರ್ ಭೇಟಿ ನೀಡಿ ತಪಾಸಣೆ ನಡೆಸಿತು.

ತಂಡದಲ್ಲಿ ಸಹಾಯಕ ಕೃಷಿ ನಿರ್ದೇಶಕ ಸಂಜೀವಕುಮಾರ ಮಾನಕರ್, ಕಂದಾಯ ನಿರೀಕ್ಷಕ ಮಂಜುನಾಥ ಮಹಾರುದ್ರ, ಗ್ರಾಮ ಆಡಳಿತ ಅಧಿಕಾರಿ ಮೈನೋದ್ದಿನ್ ಹಾಗೂ ಪೊಲೀಸ್ ಮುಖ್ಯ ಪೇದೆ ವಿಜಯಕುಮಾರ ರಾಠೋಡ ಭಾಗವಹಿಸಿದ್ದರು.

ಮೊದಲು ನಮ್ಮ ಗ್ರೋವರ್ ಸೆಂಟರ್ ಮಳಿಗೆಗೆ ಭೇಟಿ ನೀಡಿದ ಅಧಿಕಾರಿಗಳು ಬಿಲ್ ಪುಸ್ತಕ, ಅಗತ್ಯ ದಾಖಲೆಗಳು ಹಾಗೂ ಗೋದಾಮಿನ ದಾಸ್ತಾನು ಪರಿಶೀಲಿಸಿದರು. ಡಿಎಪಿ ಸೇರಿದಂತೆ ವಿವಿಧ ರಸಗೊಬ್ಬರಗಳ ಲಭ್ಯತೆ ಪರಿಶೀಲಿಸಿ, ರೈತರಿಗೆ ನಿಯಮಿತವಾಗಿ ಗೊಬ್ಬರ ವಿತರಣೆ ಮಾಡುವಂತೆ ಸೂಚನೆ ನೀಡಿದರು.

ಬಳಿಕ ವಿಶ್ವಗುರು ಟ್ರೇಡರ್ಸ್ ಮತ್ತು ಮಹಾಲಕ್ಷ್ಮಿ ಆಗ್ರೋ ಮಳಿಗೆಗಳಿಗೆ ಭೇಟಿ ನೀಡಿ ದಾಸ್ತಾನು ವಹಿ, ದರಪಟ್ಟಿ ಹಾಗೂ ರೈತರಿಗೆ ನೀಡಿರುವ ರಶೀದಿಗಳನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಅಧಿಕಾರಿಗಳು, ರಸಗೊಬ್ಬರ ಮಾರಾಟದ ಸಂದರ್ಭದಲ್ಲಿ ರೈತರಿಗೆ ಕಡ್ಡಾಯವಾಗಿ ರಶೀದಿ ನೀಡಬೇಕು. ನಿಗದಿತ ದರಕ್ಕಿಂತ ಹೆಚ್ಚಿನ ಹಣ ವಸೂಲಿ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಅಗತ್ಯವಿದ್ದರೆ ಪರವಾನಿಗೆಯನ್ನೂ ರದ್ದುಪಡಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ರೈತರಿಗೆ ಸಮರ್ಪಕ ದರದಲ್ಲಿ ರಸಗೊಬ್ಬರ ದೊರೆಯುವಂತೆ ಹಾಗೂ ಅಕ್ರಮ ವಹಿವಾಟು ತಡೆಯುವ ಉದ್ದೇಶದಿಂದ ಈ ತಪಾಸಣೆ ನಡೆಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.



ಖಾಸಗಿ ಶಿಕ್ಷಣ ಸಂಸ್ಥೆಗಳು ನಿಗದಿತ ಶುಲ್ಕಕ್ಕಿಂತ ಹೆಚ್ಚು ಹಣ ವಸೂಲಿ ಮಾಡಿದರೆ ಕಠಿಣ ಕ್ರಮ: ತಹಶೀಲ್ದಾರ್ ಅಂಬರೀಶ್

ವಿಜಯನಗರ,

ಖಾಸಗಿ ಶಿಕ್ಷಣ ಸಂಸ್ಥೆಗಳು ಪಾಲಕರಿಂದ ಸರ್ಕಾರ ಹಾಗೂ ಇಲಾಖೆ ನಿಗದಿಪಡಿಸಿರುವ ಅಧಿಕೃತ ಶುಲ್ಕವನ್ನು ಮಾತ್ರ ಪಡೆಯಬೇಕು. ನಿಗದಿತ ಶುಲ್ಕಕ್ಕಿಂತ ಹೆಚ್ಚಿನ ಹಣ ವಸೂಲಿ ಮಾಡಿದರೆ ಅಂತಹ ಶಿಕ್ಷಣ ಸಂಸ್ಥೆಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಹಶೀಲ್ದಾರ್ ಜಿ.ಕೆ. ಅಂಬರೀಶ್ ಎಚ್ಚರಿಕೆ ನೀಡಿದರು.

ಪಟ್ಟಣದ ತಾಲೂಕು ಕಚೇರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಖಾಸಗಿ ಶಿಕ್ಷಣ ಸಂಸ್ಥೆಗಳ ಪದಾಧಿಕಾರಿಗಳ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಶಿಕ್ಷಣ ಇಲಾಖೆಯಿಂದ ಅಗತ್ಯ ಪರವಾನಗಿ ಅಥವಾ ಮಾನ್ಯತೆ ಪಡೆಯದೇ ಶಾಲೆ-ಕಾಲೇಜುಗಳು ತಮ್ಮ ನಾಮಫಲಕಗಳಲ್ಲಿ ಇಂಟರ್‌ನ್ಯಾಷನಲ್ ಸ್ಕೂಲ್ ಅಥವಾ ಇಂಟರ್‌ನ್ಯಾಷನಲ್ ಕಾಲೇಜು ಎಂಬ ಪದಗಳನ್ನು ಬಳಸುವುದು ಕಾನೂನುಬಾಹಿರವಾಗಿದ್ದು, ಅಂತಹ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮೈಲೇಶ ಬೇವೂರು ಮಾತನಾಡಿ, ಸಿಬಿಎಸ್‌ಇ ಮಾನ್ಯತೆ ಪಡೆಯದೇ ಇದ್ದರೂ ಮಾನ್ಯತೆ ಪಡೆದಿರುವುದಾಗಿ ಸುಳ್ಳು ಮಾಹಿತಿ ನೀಡಿ ವಿದ್ಯಾರ್ಥಿಗಳ ಪ್ರವೇಶ ಮಾಡಿಸಿಕೊಳ್ಳುವ ಮೂಲಕ ಪಾಲಕರನ್ನು ದಾರಿ ತಪ್ಪಿಸುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು. ಶಿಕ್ಷಣ ಸಂಸ್ಥೆಗಳು ನಿಯಮಾನುಸಾರ ಕಾರ್ಯನಿರ್ವಹಿಸಿ, ಪಾಲಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸರಿಯಾದ ಮಾಹಿತಿ ನೀಡಬೇಕು. ಶಿಕ್ಷಣ ಕ್ಷೇತ್ರದಲ್ಲಿ ಪಾರದರ್ಶಕತೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಬುದ್ದಿ ದುರ್ಗೇಶ್, ಬುದ್ದಿ ಮರಿಸ್ವಾಮಿ, ವಕೀಲ ಹನುಮಂತಪ್ಪ, ಸಿಪಿಐ ದುರುಗಪ್ಪ, ಪಿಎಸ್‌ಐ ಗೀತಾಂಜಲಿ ಶಿಂಧೆ, ಎನ್. ಭರಮಣ್ಣ, ಜಯಪ್ರಕಾಶ್ ನಾಯ್ಕ, ಚಂದ್ರಶೇಖರ್ ಸೇರಿದಂತೆ ವಿವಿಧ ಶಾಲಾ-ಕಾಲೇಜುಗಳ ಆಡಳಿತ ಮಂಡಳಿಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

ತಂಬಾಕು ವ್ಯಸನದಿಂದ ದೂರವಿರಿ : ಡಾ.ಧ್ಯಾನೇಶ್ವರ್ ನಿರಗುಡೆ



ಬೀದರ,ಜೂ.14-

ಯುವಜನತೆ ಹಾಗೂ ವಿದ್ಯಾರ್ಥಿಗಳು ತಂಬಾಕು ವ್ಯಸನದಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಧ್ಯಾನೇಶ್ವರ್ ನಿರಗುಡೆ ಕರೆ ನೀಡಿದರು.

ನಗರದ ಜಿಲ್ಲಾ ಆರೋಗ್ಯಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ತಂಬಾಕು ವಿರೋಧಿ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಬೋಧಕ ಆಸ್ಪತ್ರೆ, ಎಸ್.ಬಿ. ಪಾಟೀಲ್ ದಂತ ಮಹಾವಿದ್ಯಾಲಯ, ಸಿದ್ದರಾಮೇಶ್ವರ್ ಸಂಶೋಧನಾ ಕೇಂದ್ರ, ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ವಸಂತ್ ನರ್ಸಿಂಗ್ ಕಾಲೇಜು ಮತ್ತು ಸರ್ಕಾರಿ ಬ್ರಿಮ್ಸ್ ನರ್ಸಿಂಗ್ ಕಾಲೇಜುಗಳ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಿತು.

ತಂಬಾಕು ಸೇವನೆಯು ಮಾನವನ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮ ಉಂಟುಮಾಡುವುದಲ್ಲದೆ, ಕ್ಯಾನ್ಸರ್ ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು, ಉಸಿರಾಟದ ತೊಂದರೆಗಳು ಸೇರಿದಂತೆ ಅನೇಕ ಸಾಂಕ್ರಾಮಿಕವಲ್ಲದ ರೋಗಗಳಿಗೆ ಪ್ರಮುಖ ಕಾರಣವಾಗಿದೆ ಎಂದು ಅವರು ತಿಳಿಸಿದರು.

ತಂಬಾಕು ನಿಯಂತ್ರಣ ಕಾರ್ಯಕ್ರಮಗಳ ಯಶಸ್ಸಿಗೆ ಸಾರ್ವಜನಿಕರ ಸಹಭಾಗಿತ್ವ ಅಗತ್ಯವಾಗಿದ್ದು, ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

ವಿಶ್ವ ಆರೋಗ್ಯ ಸಂಸ್ಥೆಯ ಮಾಹಿತಿಯಂತೆ, ತಂಬಾಕು ಸೇವನೆಯು ವಿಶ್ವದಾದ್ಯಂತ ಲಕ್ಷಾಂತರ ಜನರ ಸಾವಿಗೆ ಕಾರಣವಾಗುತ್ತಿದೆ. ಬಾಯಿ ಕ್ಯಾನ್ಸರ್, ಶ್ವಾಸಕೋಶ ಕ್ಯಾನ್ಸರ್, ಹೃದಯಾಘಾತ ಸೇರಿದಂತೆ ಹಲವು ಗಂಭೀರ ಕಾಯಿಲೆಗಳ ಅಪಾಯವನ್ನು ತಂಬಾಕು ಹೆಚ್ಚಿಸುತ್ತದೆ ಎಂದು ಅವರು ಎಚ್ಚರಿಸಿದರು.

ಜಾಗೃತಿ ಜಾಥಾದ ವೇಳೆ ವಿದ್ಯಾರ್ಥಿಗಳು ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಫಲಕಗಳನ್ನು ಪ್ರದರ್ಶಿಸಿ, ಘೋಷಣೆಗಳು ಮತ್ತು ಸಂದೇಶಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶಾಧಿಕಾರಿ ಡಾ.ಶಂಕರೆಪ್ಪಾ ಬೋಮ್ಮಾ, ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಅಧ್ಯಾಪಕರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಎಲ್ಎಲ್‌ಬಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ

ವಕೀಲ ವೃತ್ತಿ ಕೇವಲ ಒಂದು ಉದ್ಯೋಗ ಅಲ್ಲ, ಅದು ಸಮಾಜ ಸೇವೆಯೂ ಹೌದು : ಸಂಜೀವಕುಮಾರ್ ಕಂದಗಲ್



ಲಿಂಗಸುಗೂರು,ಜೂ.14–

ಕಾನೂನು ವಿದ್ಯಾರ್ಥಿಗಳು ತಮ್ಮ ಪ್ರತಿಭೆ ಹಾಗೂ ಪರಿಶ್ರಮದಿಂದ ಸಂಸ್ಥೆ ಮತ್ತು ಸಮಾಜಕ್ಕೆ ಕೀರ್ತಿ ತರಬೇಕು.ವಕೀಲ ವೃತ್ತಿ ಕೇವಲ ವೃತ್ತಿಯಲ್ಲ, ಇದು ಸಮಾಜ ಸೇವೆಯೂ ಹೌದು ಎಂದು ಶ್ರೀ ಬಸಮ್ಮ ಗುರುಲಿಂಗಪ್ಪ ಕಾನೂನು ಮಹಾವಿದ್ಯಾಲಯದ ಅಧ್ಯಕ್ಷ ಸಂಜೀವ್ ಕುಮಾರ್ ಕಂದಗಲ್ ಹೇಳಿದರು.

ಪಟ್ಟಣದ ಶ್ರೀ ಬಸಮ್ಮ ಗುರುಲಿಂಗಪ್ಪ ಕಾನೂನು ಮಹಾವಿದ್ಯಾಲಯದಲ್ಲಿ ಶುಕ್ರವಾರ ನಡೆದ ಎಲ್ಎಲ್‌ಬಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಾನೂನು ಅಧ್ಯಯನವು ವ್ಯಕ್ತಿಗೆ ತನ್ನ ಹಕ್ಕುಗಳು ಮತ್ತು ಕರ್ತವ್ಯಗಳ ಸ್ಪಷ್ಟ ತಿಳುವಳಿಕೆಯನ್ನು ನೀಡುತ್ತದೆ.ಇದು ಸಮಾಜದಲ್ಲಿನ ತಪ್ಪುಗಳನ್ನು ಪ್ರಶ್ನಿಸಲು, ಸ್ವಂತ ರಕ್ಷಣೆ ಮಾಡಿಕೊಳ್ಳಲು ಮತ್ತು ವಕೀಲಿಕೆ, ನ್ಯಾಯಾಂಗ ಅಥವಾ ಆಡಳಿತಾತ್ಮಕ ಉದ್ಯೋಗಗಳಲ್ಲಿ ಅತ್ಯುತ್ತಮ ವೃತ್ತಿಜೀವನವನ್ನು ರೂಪಿಸಿಕೊಳ್ಳಲು ಸಹಾಯಕರಿಯಾಗಿದೆ.ಕಾನೂನು ಶಿಕ್ಷಣಕ್ಕೆ ರಾಷ್ಟ್ರಮಟ್ಟದಲ್ಲಿ ವಿಶೇಷ ಮಾನ್ಯತೆ ಇದೆ ಆದ್ದರಿಂದ ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.

ಶಿಕ್ಷಣ ಸಂಸ್ಥೆಯನ್ನು ಬೆಳೆಸುವುದು ಸುಲಭದ ಕೆಲಸವಲ್ಲ.ಸಂಸ್ಥೆಗಳು ಸಮಾಜದ ಸೇವೆಯಲ್ಲಿ ತೊಡಗಿಕೊಂಡಿವೆ.ವೃತ್ತಿ ಜೀವನದ ಆರಂಭದಲ್ಲಿ ಕೆಲವೊಂದು ಸವಾಲುಗಳು ಎದುರಾದರೂ ಅವುಗಳಿಗೆ ಕುಗ್ಗದೆ ಮುನ್ನಡೆಯಬೇಕು. ಹೊಸ ಹೆಜ್ಜೆ ಇಡುವ ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶಗಳು ದೊರೆಯಲಿ ಹಾಗೂ ಉಜ್ವಲ ಭವಿಷ್ಯ ರೂಪಿಸಿಕೊಳ್ಳಲಿ ಎಂದು ಹಾರೈಸಿದರು.

ಹಟ್ಟಿ ವಿನಾಯಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ನರಸಪ್ಪ ಯಾದವ್ ಮಾತನಾಡಿ, ವಕೀಲ ವೃತ್ತಿಯು ಗೌರವಯುತ ಹಾಗೂ ಸಾರ್ವಜನಿಕ ಸೇವೆಯ ವೃತ್ತಿಯಾಗಿದೆ.ಇಂದಿನ ಸಮಾಜದಲ್ಲಿ ಕಾನೂನಿನ ಮಹತ್ವ ಹೆಚ್ಚಿದ್ದು, ಕಾನೂನು ಇಲ್ಲದೆ ವ್ಯಕ್ತಿಯ ಹಕ್ಕುಗಳನ್ನು ರಕ್ಷಿಸಿಕೊಳ್ಳಲು ಸಾಧ್ಯವಿಲ್ಲ. ವೃತ್ತಿ ಜೀವನದಲ್ಲಿ ಸಾಮಾಜಿಕ ಸೇವೆಯ ಮನೋಭಾವ ಬೆಳೆಸಿಕೊಳ್ಳಬೇಕು.ನಿರಂತರ ಅಧ್ಯಯನ ಹಾಗೂ ಪರಿಶ್ರಮದಿಂದ ಯಶಸ್ಸು ಸಾಧಿಸಬಹುದು. ಯಾವುದೇ ಪ್ರಕರಣ ಬಂದರೂ ಅದರ ಸಂಪೂರ್ಣ ಅಧ್ಯಯನ ಮಾಡಿ ಸಮರ್ಥವಾಗಿ ನಿರ್ವಹಿಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲ ಅಮರೇಶ ಗೌಡೂರು, ಬಿ.ಇಡಿ ಕಾಲೇಜಿನ ಪ್ರಾಚಾರ್ಯ ವೆಂಕಟೇಶ ಕವಿತಾಳ, ಖಾಸಗಿ ಶಿಕ್ಷಣ ಒಕ್ಕೂಟದ ತಾಲೂಕು ಅಧ್ಯಕ್ಷ ಮಂಜುನಾಥ ತುರ್ವಿಹಾಳ, ಚಂದ್ರಶೇಖರ ಹುನಕುಂಟಿ, ವೆಂಕಟೇಶ ಪೂಜಾರಿ, ಶಬ್ಬೀರ್‌ಸಾಬ್, ಚೋಳಮ್ಮ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಯೋಗ ದಿನಾಚರಣೆ ಪ್ರಯುಕ್ತ 7 ದಿನಗಳ ಯೋಗಭ್ಯಾಸದ ಉದ್ಘಾಟನೆ

ರಾಯಚೂರು,ಜೂ.14–

ನಗರದ ಪ್ರಜಾಪಿತಾ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ರಾಜಯೋಗಿನಿ ಬಿ.ಕೆ. ಸ್ಮಿತಾ ಅಕ್ಕನವರ ಅಧ್ಯಕ್ಷತೆ, ಕಾರ್ಯದರ್ಶಿ ಬಿ.ಕೆ. ಶಾರದಾ ಅಕ್ಕನವರ ನೇತೃತ್ವದಲ್ಲಿ ವಿಶ್ವ ರಕ್ತದಾನ ದಿನಾಚರಣೆ, ಜೂನ್ 21ರ ಯೋಗ ದಿನಾಚರಣೆ ಪ್ರಯುಕ್ತ 7 ದಿನಗಳ ಯೋಗಭ್ಯಾಸದ ಉದ್ಘಾಟನೆಯನ್ನು ಹಮ್ಮಿಕೊಳ್ಳಲಾಗಿತ್ತು.



ಮುಖ್ಯ ಅತಿಥಿಗಳಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ಡಾ. ದಂಡಪ್ಪ ಬಿರಾದಾರ,

ಡಾ. ಶಿವರಾಜ ಅತ್ತನೂರ, ಡಾ. ನವಿನ ಕುಮಾರ, ಡಾ. ಪೂಜಾ, ಯೋಗ ತರಬೇತುದಾರ ಡಾ. ತಿಮ್ಮಪ್ಪ ವಡ್ಡೆಪ್ಪಲ್ಲಿಯವರು ವೇದಿಕೆಯ ಮೇಲೆ ಇದ್ದರು.

ಬಿ.ಕೆ. ಸ್ಮಿತಾ ಅಕ್ಕನವರು ಹಾಗೂ ವೇದಿಕೆಯ ಮೇಲೆ ಆಶೀನರಾದ ಸರ್ವರೂ ಸೇರಿ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ನಂತರ ಛಾಯಾಗ್ರಾಹಕರು, ಕಲಾವಿದರು, ಪತ್ರಕರ್ತರಾದ ಪಿಕಳಿಹಾಳ ಅಯ್ಯಪ್ಪ ಸ್ವಾಮಿಯವರು ಕಳೆದ 25, 30 ವರ್ಷಗಳಿಂದ ಇಲ್ಲಿಯವರೆಗೆ ಸುಮಾರು 78 ಬಾರಿ ರಕ್ತದಾನ ಮಾಡಿದ ಪ್ರಯುಕ್ತ ಹಾಗೂ ಬಟ್ಟೆ ವ್ಯಾಪಾರಿ ಗಂಗಾಧರ ಸ್ವಾಮಿ ಗಣಾಚಾರಿ ಪಿಕಳಿಹಾಳರವರು ಸುಮಾರು 33 ಬಾರಿ ರಕ್ತದಾನ ಮಾಡಿದ ಪ್ರಯುಕ್ತ ಇವರಿಬ್ಬರಿಗೂ ಈಶ್ವರೀಯ ವಿಶ್ವ ವಿದ್ಯಾಲಯದಿಂದ ಆತ್ಮೀಯವಾಗಿ ಪೇಟ ತೊಡಿಸಿ ಸನ್ಮಾನಿಸಿ ಫಲತಾಂಬೂಲ, ಭಾವಚಿತ್ರವನ್ನು ನೀಡಿ ಗೌರವಿಸಲಾಯಿತು.

ನಂತರ ಮಾತನಾಡಿದ ರಾಜಯೋಗಿನಿ ಬಿ.ಕೆ. ಸ್ಮಿತಾ ಅಕ್ಕನವರು ಇದಕ್ಕಿಂತ ಇಂದಿನ ಕಾಲದಲ್ಲಿ ಒಬ್ಬ ವ್ಯಕ್ತಿಯ ರಕ್ತದ ಗುಂಪನ್ನು ಗುರುತ್ತಿಸಿ ಅವರಿಗೆ ಮಾತ್ರ ಇನ್ನೊಬ್ಬರ ರಕ್ತವನ್ನು ದಾನ ಮಾಡಬೇಕಾಗಿತ್ತು ಆದರೆ ಪ್ರಸ್ತುತ ತಂತ್ರಜ್ಞಾನದ ಕಾಲಮಾನದಲ್ಲಿ ಒಬ್ಬ ವ್ಯಕ್ತಿ ರಕ್ತದಾನ ಮಾಡಿದರೆ ಆ ರಕ್ತದಲ್ಲಿ ಮೂರರಿಂದ ನಾಲ್ಕು ಜನರಿಗೆ ಆ ರಕ್ತದ ಕಣಗಳನ್ನು ಉಪಯೋಗಿಸುವಂತ ಒಳ್ಳೆ ಬೆಳವಣಿಗೆ ಕಂಡು ಇಡಿದಿದ್ದಾರೆ.

ಆದುದರಿಂದ ಸರ್ವರೂ ರಕ್ತದಾನ ಮಾಡುವ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು, ರಕ್ತದಾನ ಮಾಡುವುದರಿಂದ ಮನುಷ್ಯನಲ್ಲಿ ಆರೋಗ್ಯ, ನೆಮ್ಮದಿ, ಚೈತನ್ಯವಂತನಾಗುತ್ತಾನೆ ಹಾಗೆ ತಾನು ಮತ್ತೊಬ್ಬರ ಜೀವ ಉಳಿಸಿದೆನಲ್ಲ ಎಂಬ ಖುಷಿ ಅವರಲ್ಲಿರುತ್ತದೆ, ತಂತ್ರಜ್ಞಾನಗಳು ಎಷ್ಟೇ ಮುಂದುವರಿದರು ರಕ್ತವನ್ನು ತಯಾರಿಸುವ ಕಾಲ ಬಂದಿಲ್ಲ ಯಾಕೆಂದರೆ ರಕ್ತವು ಪಂಚಭೂತಗಳಿಂದ ತಯಾರಾಗಬೇಕು ನಾವು ನಿತ್ಯ ಸೇವಿಸುವ ಒಳ್ಳೇ ಆಹಾರ, ಶುದ್ಧ ಕುಡಿಯುವ ನೀರು ಗಾಳಿ, ಜ್ವಾಲೆ, ಮಣ್ಣಿನ ಫಲವತ್ತತೆ ಹಾಗೆ ಭೂಮಿ ಆಕಾಶದ ಮಧ್ಯದಲ್ಲಿರುವ ನಾನಾ ತರಹದ ಗಿಡ ಮರಗಳ ಶುದ್ಧ ಆಕ್ಸಿಜನ್ ತಗೆದುಕೊಳ್ಳುವುದು, ಕೆಲವು ತರಕಾರಿ ಹಣ್ಣುಗಳನ್ನು ಸೇವಿಸುವ ಮೂಲಕ ಮನುಷ್ಯನಲ್ಲಿ ರಕ್ತದಾನ ಮಾಡಲು ಬಲಿಷ್ಠನಾಗುತ್ತಾನೆ, ಹಾಗೆ ಮನುಷ್ಯನು ಯಾವಾಗಲೂ ಚೈತನ್ಯ ಶೀಲನಾಗಿರಬೇಕಾದರೆ ರಕ್ತದಾನದೊಂದಿಗೆ ಯೋಗಭಾಸವನ್ನೂ ಮೈಗೂಡಿಸಿಕೊಳ್ಳಬೇಕು, ಯೋಗವೆಂದರೆ ಪುರಾತನ ಋಷಿ ಮುನಿಗಳ ಕಾಲದಿಂದಲೂ ನಮ್ಮ ಭಾರತದಲ್ಲಿ ರೂಢಿಯಲ್ಲಿರುವಂತಾದ್ದು ಅದನ್ನು ನಮ್ಮ ಕೇಂದ್ರ ಮತ್ತು ರಾಜ್ಯ ಸರಕಾರಗಳು ಜೂನ್ 21ರಂದು ದೇಶದಾದ್ಯಂತವಲ್ಲದೇ ಪ್ರಪಂಚದಾದ್ಯಂತ ಪಸರಿಸುವ ಹಾಗೆ ನಮ್ಮ ದೇಶದ ಪ್ರಧಾನ ಮಂತ್ರಿ ಸನ್ಮಾನ್ಯ ನರೇಂದ್ರ ಮೋದಿಜಿಯವರ ದೃಢ ಸಂಕಲ್ಪದಿಂದ ಪ್ರಸ್ತುತವಾಗಿ ಪ್ರತೀ ವರ್ಷವೂ ಯೋಗ ದಿನಾಚರಣೆಯನ್ನು ದೇಶದಾದ್ಯಂತ ಆಯೋಜಿಸುತ್ತಾರೆ, ಅದರ ಪ್ರಯುಕ್ತ ಇಂದಿನಿಂದ 7 ದಿನಗಳವರೆಗೆ ಈಶ್ವರೀಯ ವಿದ್ಯಾಲಯದಲ್ಲಿ ಯೋಗಾಭ್ಯಾಸ ಶಿಬಿರವನ್ನು ಉದ್ಘಾಟನೆ ಮಾಡಲಾಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕರಾದ ಡಾಕ್ಟರ್ ದಂಡಪ್ಪ ಬಿರಾದಾರ್ ಮಾತನಾಡುತ್ತಾ ಪ್ರತಿ ವರ್ಷ ಜೂನ್ 14ರಂದು ವಿಶ್ವ ರಕ್ತದಾನಿಗಳ ದಿನಾಚರಣೆಯಂದು ಆಚರಣೆ ಮಾಡಲಾಗುತ್ತದೆ ಆಸ್ಟ್ರಿಯಾದ ಕಾರ್ಲ್ಯಾಂಡ್ ಸ್ಟೈನರ್ ಎಂಬ ವಿಜ್ಞಾನಿ 191ರಲ್ಲಿ ರಕ್ತದ ಗುಂಪು ಗುಂಪುಗಳ ಕುರಿತು ನಡೆಸಿದ ಸಂಶೋಧನೆಗೆ 1931ರ 30ರಲ್ಲಿ ನೊಬೆಲ್ ಪ್ರಶಸ್ತಿ ಲಭಿಸಿತು ಈತನ ಜನ್ಮದಿನವಾದ ಜೂನ್ 14ನ್ನು ವಿಶ್ವ ಆರೋಗ್ಯ ಸಂಸ್ಥೆ ಹಾಗೂ ಮತ್ತಿತರ ಜಾಗತಿಕ ಆರೋಗ್ಯ ಸಂಸ್ಥೆಗಳು ಸೇರಿ 2004 ರಿಂದ ವಿಶ್ವ ರಕ್ತಧಾನಿಗಳ ದಿನವಾಗಿ ಆಚರಿಸಲು ಆರಂಭಿಸಿದವು, 25ರಲ್ಲಿ ವಿಶ್ವ ಆರೋಗ್ಯ ಸಭೆಯು ಇದನ್ನ ಅಧಿಕೃತಗೊಳಿಸಿತು ರಕ್ತದಾನ ಮಾಡುವುದರ ಮೂಲಕ ಆರೋಗ್ಯವನ್ನು ವೃದ್ಧಿಸಿಕೊಳ್ಳಬಹುದು ಪುರುಷರು ಕನಿಷ್ಠ ಮೂರರಿಂದ ನಾಲ್ಕು ಸಲ ವರ್ಷದಲ್ಲಿ ಸ್ತ್ರೀಯರು ಕನಿಷ್ಠ ಎರಡು ಸಲ ರಕ್ತದಾನ ಮಾಡಬಹುದು ರಕ್ತ ಮತ್ತೊಬ್ಬರ ಜೀವ ಉಳಿಸಲಿಕ್ಕೆ ಸಹಾಯಮಾಡುತ್ತದೆ ಇಂತ ಮಹತ್ವ ಕಾರ್ಯವನ್ನ ಪ್ರತಿಯೊಬ್ಬರು ಮಾಡಬೇಕೆಂದು ಡಾಕ್ಟರ್ ಬಿರಾದಾರ್ ಕರೆ ನೀಡಿದರು.

ನಂತರ ರಕ್ತದಾನಿ ಪಿಕಳಿಹಾಳರವರು ಮಾತನಾಡಿ ರಕ್ತದಾನ ಶ್ರೇಷ್ಠದಾನವಾಗಿದೆ, ರಕ್ತದಾನ ಮಾಡುವವರು ಮೊದಲು ತಾವು ಶಕ್ತಿವಂತರಾಗಿರಬೇಕು ಹಾಗೆ ನಾನು ಮತ್ತೊಬ್ಬರಿಗೆ ಪ್ರಾಣ ಉಳಿಸಬೇಕು ಎಂಬ ಒಳ್ಳೇ ಮನೋಭಾವನೆ ಹೊಂದಿರಬೇಕು ಯಾಕೆಂದರೆ ರಕ್ತದಾನ ಮಾಡಿದ ಮೇಲೆ ಅದು ರೋಗಿಗೆ ಉಪಯೋಗವಾಗಬೇಕು ಅದರಂತೆ ನಿತ್ಯವೂ ಒಳ್ಳೇ ಆಹಾರ, ಹಸಿ ತರಕಾರಿ, ಹಣ್ಣುಗಳನ್ನು ಸೇವಿಸುವ ರೂಢಿ ಬೆಳೆಸಿಕೊಳ್ಳಬೇಕು ಯಾಕೆಂದರೆ ಒಬ್ಬ ಮನುಷ್ಯ ರಕ್ತದಾನ ಮಾಡಿದರೆ ಅದರಲ್ಲಿ ಮೂರರಿಂದ ನಾಲ್ಕು ಜನರ ಪ್ರಾಣ ಉಳಿಸುವ ರಕ್ತದ ಕಣಗಳನ್ನು ವಿಂಗಡಿಸುವ ಯಂತ್ರಗಳು ಬಂದಿವೆ, ರಕ್ತದಾನದಿಂದ ಮೂರು ಜೀವಗಳು ಉಳಿಯುತ್ತವೆ ಹಾಗೆ ರಕ್ತದಾನ ಮಾಡುವುದರಿಂದ ರಕ್ತದಾನಿ ಮತ್ತೆ ಚೈತನ್ಯವಂತನಾಗುತ್ತಾನೆ, ಆರೋಗ್ಯವು ವೃದ್ಧಿಸುತ್ತದೆ, ಪುಣ್ಯದ ಕೆಲಸ ಮಾಡಿದೆ ಎಂಬ ನೆಮ್ಮದಿಯೂ ಅವರಲ್ಲಿರುತ್ತದೆ ಎಂದು ಹೇಳಿದರು.

ಸ್ವ ಉದ್ಯೋಗ ಪ್ರೇರಣಾ ಶಿಬಿರದ ಮೂಲಕ ಮಹಿಳೆಯರು ಪರಾವಲಂಬಿಯಾಗದೆ-ಸ್ವಾವಲಂಬಿಗಳಾಗಿ ಜೀವನ ನಡೆಸಬೇಕು - ಎಸ್.ವಸಂತ್

ಸಿರುಗುಪ್ಪ – ನಗರದ 28ನೇ ವಾರ್ಡಿನ ಅಂಗನವಾಡಿ ಕೇಂದ್ರದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ಮಹಿಳೆಯರು ಸ್ವ-ಉದ್ಯೋಗ ಪ್ರಾರಂಭಿಸಲು ಸ್ವ-ಉದ್ಯೋಗ ಪ್ರೇರಣಾ ಶಿಬಿರ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು



ತಾಲೂಕು ಕ್ಷೇತ್ರ ಯೋಜನಾಧಿಕಾರಿ ಎಸ್. ವಸಂತ್ ರವರು ಉದ್ಘಾಟನೆ ಮಾಡಿ ನಂತರ ಮಾತನಾಡಿದ ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ಮಹಿಳೆಯರಿಗೆ ಮೂರು ತಿಂಗಳ ಹೊಲಿಗೆ ತರಬೇತಿ, ಅಗರಬತ್ತಿ ತಯಾರಿಕೆ, ಬತ್ತಿ ತಯಾರಿಕೆ, ಫಿನಾಯಿಲ್ ತಯಾರಿಕೆ, ಬೊಕ್ಕೆ ತಯಾರಿ, ತೋರಣ ತಯಾರಿ, ಬ್ಯೂಟಿಷಿಯನ್ ಹೀಗೆ ಹತ್ತು ಹಲವು ಸ್ವ-ಉದ್ಯೋಗದಿಂದ ಸ್ವಾವಲಂಬಿ ಬದುಕನ್ನು ಕಟ್ಟಿಕೊಳ್ಳುವುದಕ್ಕೆ ಅಗತ್ಯ ತರಬೇತಿ ಹಾಗೂ ಮಾರ್ಗದರ್ಶನವನ್ನು ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ನಡೆದ ಬಾಗಿಲು ತೋರಣಗಳ ತರಬೇತಿ, ಸೀರೆ ಕುಚ್ಚು ತರಬೇತಿ, ಕೇಂದ್ರದ ಮಹಿಳೆಯರಿಗೆ ತರಬೇತಿಯಿಂದ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ನಂತರ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪೋಲಿಸ್ ಇಲಾಖೆಯ ಸಿಬ್ಬಂದಿ ನಾಗರತ್ನ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಸಾಲ ನೀಡುವ ಸಂಸ್ಥೆಯಾಗಿರದೆ

ಮಹಿಳೆರು ಇತರೆ ಕುಟುಂಬ ಸದಸ್ಯರನ್ನು ಅವಲಂಬಿಸದೆ ಸ್ವಂತ ಕೆಲಸ ಮಾಡಿ ಸ್ವಾವಲಂಬಿಗಳಾಗಿ ಜೀವನ ನಡೆಸಬೇಕು, ಇದಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಹಲವಾರು ಯೋಜನೆಗಳನ್ನ ರೂಪಿಸಿದ್ದು ಮಾಸಿಕವಾಗಿ ನಡೆಯುವ ಜ್ಞಾನವಿಕಾಸ ಕೇಂದ್ರ ಸಭೆಗಳಿಗೆ ಭಾಗವಹಿಸಿ ಮಾಹಿತಿ ಪಡೆದುಕೊಳ್ಳುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ತರಬೇತಿದಾರರು ನವೀನ ಅವರು ಸದಸ್ಯರಿಗೆ ಸೀರೆ ಕುಚ್ಚು ತರಬೇತಿ ಹಾಗೂ ಬಾಗಿಲು ತೋರಣ ತರಬೇತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ಅಧ್ಯಕ್ಷೆ ನರಸಮ್ಮ, ಜ್ಞಾನವಿಕಾಸ ಸಮನ್ವಯಾಧಿಕಾರಿ ಪ್ರಿಯಾ, ಸೇವಾಪ್ರತಿನಿಧಿ ಕಲ್ಪನಾ ಜ್ಞಾನವಿಕಾಸ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

ಶಿವರಾಜ ತಂಗಡಿಗಿಯವರಿಗೆ ಉಪಮುಖ್ಯಮಂತ್ರಿ ಮಾಡಿ!ಇಲ್ಲವೇ ಭೋವಿ ಸಮಾಜದ ಕೆಂಗಣ್ಣಿಗೆ ಗುರಿಯಾಗುತ್ತಿರಿ-ಪ್ರಮೋದ್ ಭೋವಿವಡ್ಡರ



ಕಲಬುರಗಿ: ರಾಜ್ಯ ಕಾಂಗ್ರೆಸ್ ಸರಕಾರದ ಸಚಿವ ಸಂಪುಟದಲ್ಲಿ ಭೋವಿ ಸಮಾಜದ ಧೀಮಂತ ನಾಯಕರಾದ ಮಾಜಿ ಸಚಿವ ಶಿವರಾಜ ತಂಗಡಗಿಯವರಿಗೆ ರಾಜ್ಯದ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಸಿದ್ದರಾಮೇಶ್ವರ ಭೋವಿವಡ್ಡರ ಸಂಘದ ತಾಲೂಕು ಅಧ್ಯಕ್ಷ ಪ್ರಮೋದ ಭೋವಿವಡ್ಡರ ಕಾಂಗ್ರೆಸ್ ಹೈಕಮಾಂಡರಿಗೆ ಆಗ್ರಹ ಮಾಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯದ ಇತಿಹಾಸದಲ್ಲಿ ಮೂರು ಬಾರಿ ಶಾಸಕರಾಗಿ ಎರಡು ಬಾರಿ ಸಚಿವರಾಗಿ ರಾಜ್ಯದ ಜನರಿಗೆ ಸೇವೆ ಸಲ್ಲಿಸಿದ ಭೋವಿ ಸಮಾಜದ ಧೀಮಂತ ನಾಯಕರು ಹಾಗೂ ಎಲ್ಲಾ ಸಮಾಜದವರ ಪ್ರೀತಿಗೆ ಪಾತ್ರರಾಗಿರುವ ಶಿವರಾಜ ತಂಗಡಗಿಯವರಿಗೆ ಈ ಬಾರಿ ಸಚಿವ ಸಂಪುಟದಲ್ಲಿ ರಾಜ್ಯದ ಉಪಮುಖ್ಯ ಮಂತ್ರಿ ಸ್ಥಾನ ನೀಡಬೇಕು. ಹಿಂದುಳಿದ ಸಮಾಜಕ್ಕೆ ಮಾನ್ಯತೆ ನೀಡುವುದಾದರೆ ಕಾಂಗ್ರೆಸ್ ಪಕ್ಷದ ವರಿಷ್ಠರು ಶಿವರಾಜ ತಂಗಡಗಿಯವರಿಗೆ ಉಪಮುಖ್ಯಮಂತ್ರಿ ಮಾಡಬೇಕು.ಒಂದು ವೇಳೆ ಜಾತ್ಯಾತೀತ ಮನೋಭಾವ ಹೆಸರಿಗಷ್ಟೆ ಇದ್ದರೆ ಕಾಂಗ್ರೆಸ್ ಪಕ್ಷಕ್ಕೆ ಮುಂದಿನ ದಿನಗಳಲ್ಲಿ ಭೋವಿ ಸಮಾಜ ತಕ್ಕ ಪಾಠ ಕಲಿಸಲಿದೆ.ರಾಜ್ಯ ಕಂಡ ಧೀಮಂತ ನಾಯಕ ತಂಗಡಗಿಯವರು ಹಲವಾರು ಇಲಾಖೆಗಳಲ್ಲಿ ಕೆಲಸ ಮಾಡಿರುವ ಅನುಭವ ಹೊಂದಿದಾರೆ.ಕನಕಗಿರಿ ಕ್ಷೇತ್ರದಲ್ಲಿ ಅವರು ಮಾಡಿರುವ ಅಭಿವೃದ್ಧಿಗಾಗಿ ಎಲ್ಲಾ ಸಮಾಜದ ಜನರು ಅವರಿಗೆ ಮತಗಳನ್ನು ನೀಡಿ ಒಂದು ಬಾರಿ ಸ್ವತಂತ್ರ ಅಭ್ಯರ್ಥಿಗಳಾಗಿ ಗೆಲ್ಲಿಸಿದ್ದಾರೆ.ಇದನ್ನು ಮನಗಂಡು ಕಾಂಗ್ರೆಸ್ ಪಕ್ಷ ಅವರಿಗೆ ಟಿಕೆಟ್ ನಿಡಿದ್ದರ ಪ್ರಯುಕ್ತ ಮತ್ತೆ ವಿಜಯ ಪತಾಕೆ ಹಾರಿಸಿ ಎರಡು ಬಾರಿ ಸಚಿವರಾಗಿ ಈ ರಾಜ್ಯದ ಜನರ ಸೇವೆ ಮಾಡಿದ್ದಾರೆ.ಆದ್ದರಿಂದ ಕಾಂಗ್ರೆಸ್ ಪಕ್ಷದ ವರಿಷ್ಠರು ಭೋವಿ ಸಮಾಜಕ್ಕೆ ನ್ಯಾಯ ನೀಡುವ ನಿಟ್ಟಿನಲ್ಲಿ ಶಿವರಾಜ ತಂಗಡಗಿಯವರಿಗೆ ಉಪಮುಖ್ಯಮಂತ್ರಿ ಮಾಡಲೇಬೇಕು ಎಂದು ಆಗ್ರಹಿಸಿದರು.



ಸಿರುಗುಪ್ಪ - ಆಂಧ್ರಪ್ರದೇಶ ಕರ್ನೂಲ್ ಜಿಲ್ಲೆಯ ನಂದಾವರಂ ಶ್ರೀ ಚೌಡೇಶ್ವರಿ ದೇವಿ ದೇವಸ್ಥಾನಕ್ಕೆ ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕ ಬಿ ಎಂ ನಾಗರಾಜ ಭೇಟಿ ನೀಡಿ ದರ್ಶನ ಪಡೆದರು

ಈ ಸಂದರ್ಭದಲ್ಲಿ ಮುಖಂಡರುಗಳಾದ ಬಿ.ಜಿ.ಮಂಜುನಾಥ್ ರೆಡ್ಡಿ,ಮೈಸೂರು ಪ್ರಕಾಶ್, ರಮೇಶ,ಟಿ.ವಿ. ರಾಜಶೇಖರ, ಎಸ್. ಆರ್. ವಿಕ್ರಂ, ಪವನ್ ದೇಸಾಯಿ, ಉಪಸ್ಥಿತರಿದ್ದರು.

ಇರಾನ್ ಮುಂದೆ ಶರಣಾಗಲಿದೆಅಮೇರಿಕಾ.! ಡಾ.ಜಲಾಲುದ್ದೀನ್ ನಿಖರ ಭವಿಷ್ಯ..!

ಬೆಂಗಳೂರು,ಜೂ.14–

ಇರಾನ್ ಮೇಲಿನದಾಳಿರದ್ದುಗೊಳಿಸಿ ಅಮೆರಿಕ ಇಸ್ರೇಲ್‌ಇರಾನಿಗೆ ಶರಣಾಗುವ ಸಂಭವವಿದೆ ಎಂದು ವೈದ್ಯ ಜ್ಯೋತಿಷ್ಯ ರತ್ನ ಡಾ. ಜಲಾಲುದ್ದೀನ್ ಖಚಿತ ಭವಿಷ್ಯನಡೆದಿದ್ದಾರೆ. ಮೂರುವರೆ ತಿಂಗಳು ಪೂರೈಸಿರುವ ಜಾಗೃತಿಕ ಆರ್ಥಿಕತೆಗೆ ಭಾರಿ ಪೆಟ್ಟು ನೀಡಿರುವ ಅಮೆರಿಕ ಇರಾನ್ ನಡುವಿನ ಯುದ್ಧ ಕೊನೆಗೂ ಸ್ಥಗಿತಗೊಳ್ಳುವ ವಿಷಯ ಚರ್ಚೆ ಬರಲಿದೆ ಇದೆ ಜೂನ್ 15 ರಿದ 17ರ ವರೆಗೆ ಫ್ರಾನ್ಸ್ ನಲ್ಲಿ ನಡೆಯಲಿರುವ ಜಿ7 ಶೃಂಗ ಸಭೆಯ ವೇಳೆ ಜಿನೆವಾದಲ್ಲಿ ಉಭಯ ದೇಶಗಳ ಸಹಿ ಬೀಳುವ ಸಂಭವವಿದೆ ವಾರಂತ್ಯ ಕ್ಕೆ ಇರಾನ್ ಅಮೆರಿಕ ಶಾಂತಿ ಒಪ್ಪಂದ ಅನುಮಾನ ಮೂಡಿಸಿ ಟ್ರಪ್ ಶರಣಾಗತಿಗೆ ಟೈಮ್ ಬೇಕಾಗಿದೆ ಎಂದು ಸಭೆಯಲ್ಲಿ ಕಿರುಚುತ್ತಾನೆ ಇರಾನ್ ವಿರುದ್ಧದ ಯುದ್ಧದಲ್ಲಿ ಇಸ್ರೇಲ್ ಅಮೆರಿಕಾ ಅವಮಾನ ಕೊಳಗಾಗಿ ದೇಶದ ನಾಗರಿಕರಿಂದ ಬೇಸತ್ತು ಶರಣಾಗಲಿದ್ದಾರೆ ಎಂದು ಯಾರ ಅಂಜಿಕೆ ಇಲ್ಲದೆ ನೇರ ಮತ್ತು ನಿಷ್ಠುರವಾಗಿ ಮುಸ್ಲಿಂ ನೂತನ ವರ್ಷ ಆರಂಭದ ದೊಳಗಾಗಿ ಶಾಂತಿ ಒಪ್ಪಂದ ವಾಗಲಿದೆ ಆದರೂಯುದ್ಧದ ಕರಾಳತೆಕ್ರೌರ್ಯತೆಸದ್ಯ ಮಾಯವಾಗುವುದಿಲ್ಲ ಭೀಕರ ಧಾಳಿಗಳ ಆತಂಕದ ವಾತಾವರಣದಲ್ಲಿ ಇಸ್ರೇಲ್ ಅಮೇರಿಕಾ ತತ್ತರಿಸಲಿದೆ ಎಂಬುದು ಈ ಯುದ್ಧ ಸಾಬೀತುಪಡಿಸಿದಾಗಿದೆ . ಅಲ್ಲದೆಅನಗತ್ಯಯುದ್ಧದಿಂದ ಎಕಾನಮಿಕ್ ಕ್ಯಾಶ್ ಆಗಿಹೋಗಿದೆಎಂಬುವುದು ಯಾರು ಅಲ್ಲಗಳಿವಂತಿಲ್ಲ ಕಡ್ಡಾಯ ಸೇನಾನೇಮಕಾತಿ ವಿರೋಧಿಸಿ ಇಸ್ರೇಲ್ ನಲ್ಲಿ ಭಾರಿಪ್ರತಿಭಟನೆತಾರಕಕ್ಕೇರಿದೆ 50 ಕ್ಕೂಹೆಚ್ಚುರಾಜ್ಯಗಳಲ್ಲಿ ಟ್ರಂಪ್ ವಿರುದ್ಧ3300ಪ್ರತಿಭಟನಾರಾಲಿನಡೆಸಿದ್ದಾಗಿದೆ ಅಮೇರಿಕಾಆರಂಭಿಸದ ಯುದ್ಧದ ವಿರುದ್ಧ ಯುರೋಪ್ ಅರಬ್ ದೇಶಗಳಿಗೆ ಸವಾಲು ಹಾಕಿ ಮೂರನೇ ವಿಶ್ವ ಯುದ್ಧದ ಅಪಾಯ ಇರಾನ್ ಸೃಷ್ಟಿಸಿದ್ದು ವಿಶ್ವಗಮನಿಯ. ಯುದ್ಧದಲ್ಲಿ ಪಾಲ್ಗೊಂಡ ಎಲ್ಲಾ ದೇಶದ ಸೇನಾ ಕಾರ್ಯಾಚರಣೆಗೆ ಯುದ್ಧದ ಭೀಕರದಾಳಿಗಳು ಎಚ್ಚರಿಕೆಯಾಗಿವೆ ಇರಾನ್ ಸದೆಬಡಿಯಲು ಯುಎಸ್ ಸೇನೆಯ ಪ್ರಬಲ ಭೀಕರ ದಾಳಿ ಖಂಡಿಸಿ ಜಗತ್ತಿನ ಜನಬೀದಿಗಿಳಿದು ಪ್ರತಿಭಟಿಸುತ್ತಿದ್ದಾರೆ



68ಭಾರತೀಯರಿದ್ದ 3 ಹಡುಗಗಳಮೇಲೆಅಮೆರಿಕ ಭೀಕರ ದಾಳಿಗೆ ಮೂರು ಭಾರತೀಯರನ್ನು ಬಲಿ ತೆಗೆದುಕೊಂಡ ಟ್ರಂಪ್ ಗೆ ದೇಶದ ಪ್ರಧಾನಿ ನರೇಂದ್ರ ಮೋದಿಯವರು ಎಚ್ಚರಿಕೆ ನೀಡಿರುವುದು ನಾಚಿಕೆಯ ವಿಷಯ. ಅಮೇರಿಕಾದಿಂದ ಭಾರತಕ್ಕೆಪದೇಪದೇಅವಮಾನಗಳಾ ರೂಯಾಕೆ ನಮ್ಮ ಮೋದಿ ಮಾತನಾಡುತ್ತಿಲ್ಲ ಎಂದು ದೇಶದ ಜನಪ್ರಶ್ನೆ ಸುವಂತಾಗಿದೆ ಇರಾನ್ ಅಣುಬಾಂಬ್ ಪರೀಕ್ಷೆ ಯಿಂದ ಮೂರನೇ ವಿಶ್ವ ಯುದ್ಧದಅಪಾಯದಲ್ಲಿ ಜಗತ್ತುಸಿಲುಕಿದೆ ಎಂಬುದು ಈಯುದ್ಧಸಾಬೀತು ಪಡಿಸಲಿದೆ. ಇರಾನ್ ಅಣುವಸ್ತ್ರ ಗಳನ್ನು ಪಡೆಯುವ ಯಾವುದೇ ಪ್ರಯತ್ನವನ್ನು ಶಾಶ್ವತವಾಗಿ ಕೈ ಬಿಡಲು ಒಪ್ಪಿಕೊಂಡಿದೆ ಎಂದು ಟ್ರಂಪ್ ಮತ್ತೊಮ್ಮೆ ಪ್ರತಿಪಾದಿಸಿ ಮಿತ್ರರಾಷ್ಟ್ರ ಗಳದಿಕ್ಕುತಪ್ಪಿಸುತ್ತಿರುವ ರಹಸ್ಯ ಬಯಲಾ ಗಲಿದೆ ಎಂದುಹೇಳಿದ ಭವಿಷ್ಯ ನಿಜವಾಗುವುದೇ ಕಾದು ನೋಡೋಣ..!

ಜೆ.ಕೆ.ಎಚ್ ಕಲಬುರ್ಗಿ



ಹಂಪನಗೌಡ ಬಾದರ್ಲಿ ಅವರಿಗೆ ಸಚಿವ ಸ್ಥಾನ ಸಿಗಲಿ ಎಂದು ಪ್ರಾರ್ಥಿಸಿದ ಕಾಂಗ್ರೆಸ್ ಮುಖಂಡರು

ದಿನಾಂಕ. 13.6.2026 ರಂದು ವಾರ್ಡ್ ನಂಬರ್. 30. ರಲ್ಲಿ ಇರುವ. ಪ್ರಸಿದ್ಧ ಸೂಫಿ ಸಂತರಾದ.ಹಜರತ್ ಸೈಯದ್ ಶಾಹ್ ಖಾದ್ರಿ. ಯವರ ಉರ್ಸ್ ಮುಬಾರಕ್ ಕಾರ್ಯಕ್ರಮ ಅದ್ದೂರಿಯಾಗಿ ನೆರವೇರಿತು. ಈ ಸಂದರ್ಭದಲ್ಲಿ.ಅಪಾರ ಸಂಖ್ಯೆಯಲ್ಲಿ. ಭಕ್ತರು. ಉರುಸ್ ಕಾರ್ಯಕ್ರಮದಲ್ಲಿ ಭಾಗವಹಿಸಿ. ಷಹಾ ಖಾದ್ರಿ ಬಾಬಾ ರವರ ದರ್ಶನ ಪಡೆದುಕೊಂಡರು. ಮತ್ತು ಕಾಂಗ್ರೆಸ್ ಮುಖಂಡರುಗಳು. ಕಾರ್ಯಕರ್ತರು ಒಗ್ಗೂಡಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ತಮ್ಮ ನೆಚ್ಚಿನ ನಾಯಕರಾದ. ಸಿಂಧನೂರು ಶಾಸಕ ಬಾದರ್ಲಿ ಹಂಪನಗೌಡ ಅವರಿಗೆ. ಮುಂಬರುವ ದಿನಗಳಲ್ಲಿ ಸಚಿವ ಸ್ಥಾನ ದೊರೆಯಲ್ಲಿ. ಆ ಮೂಲಕ ನಮ್ಮ ಭಾಗದ ಅಭಿವೃದ್ಧಿ ಮತ್ತಷ್ಟು ವೇಗವಾಗಿ ಸಾಗಲಿ ಎಂದು. ಷಾಹಾ ಖಾದ್ರಿ. ಬಾಬಾ ರವರ ಸನ್ನಿಧಿಯಲ್ಲಿ. ಭಕ್ತಿ ಪೂರ್ವಕವಾಗಿ ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ. ಮುಖಂಡರಾದ.ಪಂಪನಗೌಡ ಬಾದರ್ಲಿ. ಸಯ್ಯದ್ ಹಾರೂನ್ ಪಾಶ.ಜಾಗಿರದಾರ ಖಾಜಿ ಮಲಿಕ್ ವಕೀಲರು. ವೈ ಅನಿಲ್ ಕುಮಾರ ಪಕ್ಷದ ಪ್ರಮುಖ ನಾಯಕರು ನಿಷ್ಠಾವಂತ ಕಾರ್ಯಕರ್ತರು ಮತ್ತು ಪಕ್ಷದ ಅಭಿಮಾನಿಗಳು ಉಪಸ್ಥಿತರಿದ್ದರು.



ವಿವಿಧ ಕಾಮಗಾರಿಗಳಿಗೆ ಶರಣಗೌಡ ಬಯ್ಯಾಪುರ ಚಾಲನೆ

ಲಿಂಗಸುಗೂರು,ಜೂ.14–

ತಾಲೂಕಿನ ವಿವಿದ ಗ್ರಾಮಗಳ ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಯೋಜನೆಯ ಹಾಗೂ ಡಿ ಎಮ್ ಎಫ್(ಖನಿಜ ನಿಧಿ) ಯೋಜನೆಯಡಿಯಲ್ಲಿ ಒಟ್ಟು 50 ಲಕ್ಷ ರೂ ವೆಚ್ಚದಲ್ಲಿ ಯರಡೋಣ, ಗ್ರಾಮದ ಸರಕಾರಿ ಶಾಲಾ ಕಟ್ಟಡಕ್ಕೆ 20 ಲಕ್ಷ, ಹಾಗೂ ಜಲದುರ್ಗ, ಹಂಚಿನಾಳ, ಯಳಗುಂದಿ, ಸಿ ಸಿ ರಸ್ತೆಗಳಿಗೆ ಅಭಿವೃದ್ಧಿಯ ಹರಿಕಾರರು ಶ್ರೀ ಶರಣಗೌಡ ಪಾಟೀಲ್ ಬಯ್ಯಾಪೂರ ಭೂಮಿ ಪೂಜೆ ಮಾಡುವ ಮೂಲಕ ವಿದುಕ್ತವಾಗಿ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು

ಈ ಎಲ್ಲಾ ಗ್ರಾಮಗಳ ಕಾಮಗಾರಿಯೂ ಗುಣಮಟ್ಟ ದಿಂದ ಕೂಡಿರಬೇಕೆಂದು ಕೆ. ಆರ್. ಐ.ಡಿ. ಎಲ್.ನ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸುಜಾತ ಹೊನ್ನೂರ್ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಭೂಪನಗೌಡ ಕರುಡಕಲ್. ಜಿಲ್ಲಾ ಗ್ಯಾರಂಟಿ ಯೋಜನಾ ಅಧ್ಯಕ್ಷರಾದ ಪಾಮಯ ಮುರಾರಿ. ಬಸವರಾಜ್ ಗಣೇಕಲ್. ಸೋಮಶೇಖರ ಐದನಾಳ. ಬಸವರಾಜ್ ಬಸಾಪುರ. ಜಗದೀಶ್ ಗೌಡ ಹಾಲಬಾವಿ. ಪ್ರಕಾಶ್ ಕುರಿ. ವಿಧಾನ ಪರಿಷತ್ ಸದಸ್ಯರ ಆಪ್ತ ಕಾರ್ಯದರ್ಶಿ ಚಿನ್ನಾರೆಡ್ಡಿ ಬಿರಾದಾರ್ ಉಪಸ್ಥರಿದ್ದರು.

ಡಿಸ್ಕ್ಲೈಮರ್:–ಈ ಪತ್ರಿಕೆಯಲ್ಲಿ ಪ್ರಕಟವಾಗುವ ಸುದ್ದಿ, ಅಭಿಪ್ರಾಯಗಳು, ಚಿತ್ರಗಳು ಹಾಗೂ ಮಾಹಿತಿಗಳು ವಿಶ್ವಾಸಾರ್ಹ ಮೂಲಗಳ ಆಧಾರದ ಮೇಲೆ ಸಾರ್ವಜನಿಕ ಹಿತಾಸಕ್ತಿ ಮತ್ತು ಜಾಗೃತಿಗಾಗಿ ಮಾತ್ರ ಪ್ರಕಟಿಸಲ್ಪಟ್ಟಿವೆ. ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಮುದಾಯವನ್ನು ಅವಹೇಳನಗೊಳಿಸುವ, ಅವಮಾನ ಮಾಡುವ ಅಥವಾ ಖಾಸಗಿ ಹಕ್ಕಿಗೆ ಧಕ್ಕೆ ತರುವ ಉದ್ದೇಶ ಇಲ್ಲ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR